# ಕರಾವಳಿ ತರಂಗಿಣಿ

ಕಡಲ ಕಿನಾರೆಯಿಂದ ಕೆಂಪು ಕೋಟೆಯವರೆಗೆ..

ಕನ್ನಡ ವಾರಪತ್ರಿಕೆ

**ಸುಭಾಷಿತ:**

ಕಷ್ಟ ಬಂತೆಂದು ಅತ್ತರೆ ನಾಟಕ ಎನ್ನುವರು
ಸುಖದಲ್ಲಿದ್ದೇನೆಂದು ನಕ್ಕರೆ ಹುಚ್ಚ ಎನ್ನುವರು
ಗೌರವಕ್ಕಾಗಿ ಮೌನವಾದರೆ ತಕ್ಕಿತನ್ನ ಎನ್ನುವರು
ಪರರಿಗೆ ನೆರವಾದರೆ ಅಧಿಕಪ್ರಸಂಗಿ ಎನ್ನುವರು
ಸಹವಾಸ ಸಾಕೆಂದರೆ ಅಹಂಕಾರಿ ಎನ್ನುವರು
ಸತ್ತವರನ್ನು ಬದುಕಿಸುವಂತೆ ಮಾಡುವರು
ಬದುಕಿದವರನ್ನು ಸಾಯಿಸಿಯೇ ಬಿಡುವರು
ಇದ್ದಾಗ ನಗುವರು.. ಹೋದಾಗ ಅಳುವರು
ಇದೆಲ್ಲವ ಬಿಟ್ಟು ಬಾಳಿದರೆ ಮನುಜನಾಗುವರು..
**ಭಗವಾನ್ ಶ್ರೀಕೃಷ್ಣ**



REGD NO: 1327299/KARKAN/2018/26532 www.karavalitharangini.com KARAVALI THARANGINI KANNADA Weekly Mangaluru ದಿನಾಂಕ: 30-05-2025 to 05-06-2025 ಬೆಲೆ: 7-00 ಸಂಪುಟ–4 ಸಂಚಿಕೆ–49 ಪುಟಗಳು–6

ಕ್ಷಣ ಕ್ಷಣದ ಸುದ್ದಿಗಳಿಗಾಗಿ
ಕರಾವಳಿ ತರಂಗಿಣಿ
ಪತ್ರಿಕಾ ಬಳಗದಿಂದ
ಅಂತರ್ಜಾಲ ಮಾಧ್ಯಮ
www.karavalitharangini.com
ಕರಾವಳಿ ತರಂಗಿಣಿ
ಮಂಗಳೂರು







ಬೇಸಿಗೆ ರಜೆ ಮುಗಿದು ಶಾಲೆ ಆರಂಭವಾಗಿದ್ದು, ಶಾಲೆಗೆ ಹೊರಟ ವಿದ್ಯಾರ್ಥಿಗಳನ್ನು ಮಳೆರಾಯನೂ ಸ್ವಾಗತಿಸುತ್ತಿದ್ದಾನೆ. ಇದರ ನಡುವೆ ಅಲ್ಲೊಂದು ಇಲ್ಲೊಂದು ಕೊರೊನಾ ಪ್ರಕರಣ ಬೆಳಕಿಗೆ ಬರುತ್ತಿರುವುದು ಆತಂಕ ಮೂಡಿಸುವಂತಿದೆ. ಆದರೆ ಕೊರೊನಾ ಬಗ್ಗೆ ಆತಂಕ ಪಡದೆ ಜಾಗರೂಕತೆಯಿಂದ ಇರುವುದು ಉತ್ತಮ ಎಂದು ತಜ್ಞರ ಅಭಿಪ್ರಾಯ.

## ಕೋಮು ದ್ವೇಷ ಅಳಿಯಬೇಕು –ನವೀನ್ ಪಡೀಲ್



**ಮಂಗಳೂರು:** ನಮ್ಮ ಮಂಗಳೂರು ಸೌಹಾರ್ದತೆಯ ಊರು, ಬುದ್ಧಿವಂತರ ಊರು. ಆದರೆ ಈಗ ಜಾತಿ ಗಲಾಟೆ, ಕೋಮು ಗಲಭೆ ನಡೆಯುತ್ತಾ ಹೋದರೆ ಇಲ್ಲಿ ಬದುಕು ಕಷ್ಟವಾಗಬಹುದು. ಯುವ ಜನರ ಭವಿಷ್ಯಕ್ಕೆ ಮಾರಕವಾಗಬಹುದು ಮಂಗಳೂರಿನ ಸೌಹಾರ್ದ ಉಳಿಯಬೇಕು. ಕೋಮುದ್ವೇಷ ಅಳಿಯಬೇಕು. ಈಗ ಇರುವ ಗೊಂದಲದ ವಾತಾವರಣವನ್ನು ನಾವು ಸರಿ ಮಾಡಬೇಕು. ಎಂದು ತುಳು ರಂಗಭೂಮಿ ಹಾಗೂ ಸಿನಿಮಾ ನಟ ನವೀನ್.ಡಿ.ಪಡೀಲ್ ಆತಂಕ ವ್ಯಕ್ತಪಡಿಸಿದ್ದಾರೆ. ಮಂಗಳೂರು ಪ್ರೆಸ್ ಕ್ಲಬ್ ವತಿಯಿಂದ ಮಂಗಳವಾರ ನಗರದ ಪತ್ರಿಕಾ ಭವನದಲ್ಲಿ ನಡೆದ ಪ್ರೆಸ್ ಕ್ಲಬ್ ಗೌರವ ಅತಿಥಿ ಕಾರ್ಯಕ್ರಮದಲ್ಲಿ ಸನ್ಮಾನ ಸ್ವೀಕರಿಸಿ ಮಾತನಾಡಿದರು. ಹಿಂದು, ಮುಸ್ಲಿಂ ಮತು ಕ್ರೈಸ್ತರು ಹೀಗೆ ಎಲ್ಲರೂ ಹೊಂದಾಣಿಕೆಯಿಂದ ಇದ್ದರೆ ಇಲ್ಲಿ ಯಾವುದೇ ಸಮಸ್ಯೆ ಇಲ್ಲ ಎಂದರು. ರಾಜಕೀಯ ಬೇಕು. ಆದರೆ ಓಟು ಪಡೆಯಲು ಇನ್ನೊಬ್ಬರಿಗೆ ತೊಂದರೆ ಮಾಡಬಾರದು. **3ನೇ ಪುಟಕ್ಕೆ**

## ಜಿಲ್ಲೆಯಲ್ಲಿ ಶಾಂತಿ ಕದಡಲು ಸರ್ಕಾರ ಕಾರಣ –ಕುಂಪಲ..



**ಮಂಗಳೂರು:** ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ಪ್ರತಿ ಸಂಧರ್ಭದಲ್ಲಿಯೂ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಪ್ರಕ್ಷುಬ್ಧ ವಾತಾವರಣ ಸೃಷ್ಟಿಯಾಗುತ್ತದೆ. ಓಲೈಕೆ ರಾಜಕಾರಣ, ಪೊಲೀಸ್ ಇಲಾಖೆಯಲ್ಲಿ ಅತಿಯಾದ ಹಸ್ತಕ್ಷೇಪ, ಸಮಾಜಘಾತುಕ ಶಕ್ತಿಗಳ ಪೋಷಣೆಯಿಂದಾಗಿ ಜಿಲ್ಲೆಯಲ್ಲಿ ಶಾಂತಿ, ಸಾಮರಸ್ಯ ಕದಡಲು ಕಾಂಗ್ರೆಸ್ ಸರ್ಕಾರವೇ ನೇರ ಕಾರಣ ಎಂದು ದಕ್ಷಿಣ ಕನ್ನಡ ಜಿಲ್ಲಾ ಬಿಜೆಪಿ ಅಧ್ಯಕ್ಷರಾದ ಸತೀಶ್ ಕುಂಪಲ ಆರೋಪಿಸಿದ್ದಾರೆ. ಸುಹಾಸ್ ಶೆಟ್ಟಿ ಹತ್ಯೆ ಸಂಧರ್ಭದಲ್ಲಿ ರಾಜ್ಯದ ಗೃಹ ಸಚಿವರು ಒಂದು ಸಮುದಾಯದ ನಾಯಕರ ಬಳಿ ಸಭೆ ನಡೆಸಿರುವುದು. ಉಸ್ತುವಾರಿ ಸಚಿವರಾದ ದಿನೇಶ್ ಗುಂಡೂರಾವ್ ಪದೇಪದೇ ಸುಹಾಸ್ ಶೆಟ್ಟಿಯನ್ನು ರೌಡಿಶೀಟರ್ ಎನ್ನುತ್ತಾ ಅಲ್ಪಸಂಖ್ಯಾತರನ್ನು ಸಂತುಷ್ಟಿಗೊಳಿಸಲು ಪ್ರಯತ್ನಿಸಿರುವುದು, ಸುಹಾಸ್ ಶೆಟ್ಟಿ ಅಂತಿಮ ಯಾತ್ರೆಯಲ್ಲಿ ಯಾವುದೇ ರೀತಿಯ ಅಹಿತಕರ ಘಟನೆ ಸಂಭವಿಸದಂತೆ ಜಿಲ್ಲೆಯ ಬಿ.ಜೆ.ಪಿ. ನಾಯಕರು, ಶಾಸಕರು, ಹಿಂದು ಸಂಘಟನೆಯ ಪ್ರಮುಖರು ಕಾಳಜಿ ವಹಿಸಿದ್ದರು. ಆದರೂ ಕೂಡ ಹಿಂದು ನಾಯಕರಾದ ಶರಣ್ ಪಂಪವೆಲ್, ಬುಜಂಗ ಕುಲಾಲ್‌ರವರನ್ನು **3ನೇ ಪುಟಕ್ಕೆ**

## ಗೌರವಯುತವಾಗಿ ಬದುಕುವ ಗ್ಯಾರಂಟಿ ಕೊಡಿ –ಇನಾಯತ್



**ಮಂಗಳೂರು:** ಅಮಾಯಕ ಯುವಕನ ಕೊಲೆಗೆ ದಕ್ಷಿಣ ಕನ್ನಡ ಜಿಲ್ಲೆ ಬೆಚ್ಚಿ ಬಿದ್ದಿದೆ. ಜಿಲ್ಲೆಯಲ್ಲಿ ಇತ್ತೀಚೆಗೆ ನಡೆಯುತ್ತಿರುವ ಅಹಿತಕರ, ಕೋಮು ಸಂಘರ್ಷ ಹುಟ್ಟು ಹಾಕುವಂತಹ ಘಟನೆಗಳು ಜಿಲ್ಲೆಯ ಜನರ ನೆಮ್ಮದಿಯನ್ನು ಹಾಳುಗೆಡಹಿದೆ. ಶಾಂತಿಯ ವಾತಾವರಣವನ್ನು ಕೆಡಿಸಿ ಆ ಮೂಲಕ ರಾಜಕೀಯ ಲಾಭ ಪಡೆದುಕೊಳ್ಳುವ ಹುನ್ನಾರಗಳ ಭಾಗವಾಗಿ ಇಂತಹ ಘಟನೆಗಳು ಮರುಕಳಿಸುತ್ತಿವೆ. ಪ್ರತಿಯೊಂದು ಘಟನೆಗಳು ನಡೆದಾಗಲೂ ಅದನ್ನು ಸರಕಾರಕ್ಕೆ ತಲುಪಿಸುವಂತಹ ಕೆಲಸ ನಡೆದರೂ **3ನೇ ಪುಟಕ್ಕೆ**







## ಸುದ್ದಿ ತುಣುಕು

ಶಿರೂರಿನಲ್ಲಿ ಮತ್ತೆ ಗುಡ್ಡ ಕುಸಿಯುವ ಭೀತಿ ಎದುರಾಗಿದೆ. ಜಿಲ್ಲಾಡಳಿತ ಫೇರಿಯಲ್ ವಾಲ್ ನಿರ್ಮಾಣಕ್ಕೆ ಮುಂದಾಗಿದೆ.

ಕನ್ನಡ ಕುರಿತು ವಿವಾದಾತ್ಮಕ ಹೇಳಿಕೆ ನೀಡಿರುವ ನಟ ಕಮಲ್ ಹಾಸನ್ ವಿರುದ್ಧ ಕನ್ನಡ ಪರ ಸಂಘಟನೆಗಳು ಆಕ್ರೋಶ ಹೊರ ಹಾಕಿವೆ.

ಯಾರೇ ಆಗಿದ್ದರೂ ಮುಲಾಜಿಲ್ಲದೇ ಕ್ರಮ ಕೈಗೊಳ್ಳುತ್ತೇವೆ. ಆದರೆ ಯಾವ ಕ್ರಮ ಕೈಗೊಳ್ಳುತ್ತೇವೆ ಎನ್ನುವುದನ್ನು ಹೇಳುವುದಿಲ್ಲ ಎಂದು ಗೃಹ ಸಚಿವ ಜಿ. ಪರಮೇಶ್ವರ್ ಹೇಳಿದ್ದಾರೆ.

ಸದಾಶಿವನಗರದಲ್ಲಿನ ಬಿ.ಕೆ.ಹರಿಪ್ರಸಾದ್ ನಿವಾಸಕ್ಕೆ ಸಿಎಂ ಸಿದ್ದರಾಮಯ್ಯ ಭೇಟಿ ನೀಡಿದ್ದು, ಭಾರೀ ಕುತೂಹಲಕ್ಕೆ ಕಾರಣವಾಗಿದೆ.

ಮುಂಗಾರು ಮಳೆ ಆರಂಭವಾಗಿದ್ದು ರಾಜ್ಯದ ರೈತರೆಲ್ಲರೂ ಬೀಜ ಬಿತ್ತನೆಗೆ ತಯಾರು ಮಾಡಿಕೊಂಡಿದ್ದಾರೆ. ಆದರೆ ಹಾವೇರಿಯ ರೈತರಿಗೆ ಬಿತ್ತನೆ ಬೀಜಗಳು ಮತ್ತು ಗೊಬ್ಬರವೇ ಸಮಸ್ಯೆಯಾಗಿದೆ.

ಕಾಂಗ್ರೆಸ್ ಪಕ್ಷದ ಒಳಜಗಳದಿಂದ ಯಾವುದೇ ಕ್ಷಣದಲ್ಲಿ ರಾಜ್ಯ ಸರ್ಕಾರ ಬೀಳಬಹುದು ಎಂದು ಬಿಜೆಪಿ ರಾಜ್ಯ ಉಸ್ತುವಾರಿ ಮತ್ತು ರಾಜ್ಯಸಭಾ ಸದಸ್ಯ ಡಾ. ರಾಧಾಮೋಹನ್ ದಾಸ್ ಅಗರ್ವಾಲ್ ಭವಿಷ್ಯ ನುಡಿದಿದ್ದಾರೆ.

ಹುಕ್ಕೇರಿ ತಾಲೂಕಿನ ಹಿಡಕಲ್ ಜಲಾಶಯದಿಂದ ಸುಮಾರು 110 ಕಿ.ಮೀ. ಪೈಪ್‌ಲೈನ್ ಮೂಲಕ ಧಾರವಾಡ ಕೈಗಾರಿಕಾ ಪ್ರದೇಶಕ್ಕೆ ನೀರು ಒಯ್ಯುವ ಕಾಮಗಾರಿ ಮತ್ತೆ ಆರಂಭವಾಗಿದೆ.

ರಾಜ್ಯ ಉನ್ನತ ಮಟ್ಟದ ಒಪ್ಪಿಗೆ ನೀಡುವ ಸಮಿತಿಯ 65ನೇ ಸಭೆಯಲ್ಲಿ ವಿವಿಧ ಹಂತದಲ್ಲಿರುವ ಒಟ್ಟು 10 ತಿದ್ದುಪಡಿ ಯೋಜನಾ ಪ್ರಸ್ತಾವನೆಗಳಿಗೆ ಅನುಮೋದನೆ ಸಿಕ್ಕಿದೆ.

ಅಧಿಸೂಚನೆ ಹೊರಡಿಸಿ 24 ವರ್ಷ ಕಳೆದರೂ ಭೂಮಿ ಸ್ವಾಧೀನ ಮಾಡಿಕೊಳ್ಳದ ಬಿಡಿಎ ಕ್ರಮಕ್ಕೆ ಗರಂ ಆಗಿರುವ ಹೈಕೋರ್ಟ್, ಭೂಸ್ವಾಧೀನ ಪ್ರಕ್ರಿಯೆಯನ್ನು ರದ್ದುಗೊಳಿಸಿದೆ.

ಎಂಎಸ್‌ಪಿ ಯೋಜನೆಯಡಿ ಖರೀದಿ ಕೇಂದ್ರಗಳಲ್ಲಿ ಆಯಾ ಜಿಲ್ಲಾಧಿಕಾರಿಗಳು ವೈಜ್ಞಾನಿಕ ಅಧ್ಯಯನ ನಡೆಸಲು ಹೈಕೋರ್ಟ್ ಸೂಚನೆ.

ಕೋವಿಡ್ ಬಗ್ಗೆ ಯಾರೂ ಗಾಬರಿ ಪಡುವ ಅಗತ್ಯ ಇಲ್ಲ. ಶಿಕ್ಷಣ ಇಲಾಖೆಗೆ ಯಾವುದೇ ಮಾರ್ಗಸೂಚನೆ ಇಲ್ಲಿಯವರೆಗೆ ಇಲ್ಲ ಎಂದು ಸಚಿವ ಮಧು ಬಂಗಾರಪ್ಪ ತಿಳಿಸಿದರು.

ರಾಜ್ಯದ ನಾಲ್ಕು ಪ್ರಮುಖ ಜಿಲ್ಲೆಗಳಲ್ಲಿ 1,741.60 ಕೋಟಿ ಬಂಡವಾಳ ಹೂಡಿಕೆಯ ಒಟ್ಟು 63 ಯೋಜನೆಗಳಿಗೆ ಅನುಮೋದನೆ ನೀಡಿದ್ದು, ಇದರಿಂದ 7,219 ಜನರಿಗೆ ಉದ್ಯೋಗ ಅವಕಾಶಗಳು ದೊರೆಯಲಿವೆ.

ಸಂಚಾರ ನಿಯಮ ಉಲ್ಲಂಘನೆ ಪತ್ತೆಗಾಗಿ ಎಲ್ಲೆಂದರಲ್ಲಿ ನಿಂತು ಅವೈಜ್ಞಾನಿಕವಾಗಿ ತಪಾಸಣೆ ಮಾಡದಂತೆ ಹಾಗೂ ವಾಹನ ಸವಾರರಿಗೆ ತೊಂದರೆಯಾಗದ ರೀತಿ ಕಾರ್ಯಾಚರಣೆ ನಡೆಸಬೇಕೆಂದು ಬೆಂಗಳೂರು ನಗರ ಸಂಚಾರ ಪೊಲೀಸರಿಗೆ ಹಿರಿಯ ಅಧಿಕಾರಿಗಳು ತಾಕೀತು ಮಾಡಿದ್ದಾರೆ.

ಕಳೆದೆರಡು ವರ್ಷಗಳಿಂದ ಜನಾಂಗೀಯ ಹಿಂಸಾಚಾರಕ್ಕೆ ಸಾಕ್ಷಿಯಾಗಿರುವ ಮಣಿಪುರದಲ್ಲಿ ಫೆಬ್ರವರಿಯಿಂದ ರಾಷ್ಟ್ರಪತಿ ಆಳ್ವಿಕೆ ಇದೆ. ಇದೀಗ ಸರ್ಕಾರ ರಚನೆಗೆ 44 ಶಾಸಕರು ಬೆಂಬಲ ವ್ಯಕ್ತಪಡಿಸಿದ್ದಾರೆ ಎಂದು ಬಿಜೆಪಿ ನಾಯಕರು ಹೇಳಿದ್ದಾರೆ.

ಕನ್ನಡ ಭಾಷೆಗೆ ದೀರ್ಘಕಾಲದ ಇತಿಹಾಸವಿದೆ, ಪಾಪ ಕಮಲ್‌ಹಾಸನ್ ಅವರಿಗೆ ತಿಳಿದಿರುವಂತಿಲ್ಲ ಸಿಎಂ ಸಿದ್ದರಾಮಯ್ಯ ತಿಳಿಸಿದ್ದಾರೆ.

ಶಿವಮೊಗ್ಗದ ಹಿಂದೂ ಕಾರ್ಯಕರ್ತ ಹರ್ಷ ಕೊಲೆ ಪ್ರಕರಣದ ಆರೋಪಿಗಳಿಬ್ಬರೂ ಎರಡು ದಿನಗಳ ಹಿಂದೆ ಜೈಲಿನಲ್ಲಿ ತಕರಾರು ತೆಗೆದು ಗಲಾಟೆ ಮಾಡಿದ್ದಾರೆ. ಸದ್ಯ ಇಬ್ಬರಿಗೂ ಎಚ್ಚರಿಕೆ ನೀಡಿ ಪ್ರತ್ಯೇಕವಾಗಿ ಇರಿಸಲಾಗಿದೆ" ಎಂದು ಬಳ್ಳಾರಿ ಕೇಂದ್ರ ಕಾರಾಗೃಹದ ಅಧೀಕ್ಷಕಿ ಲತಾ ತಿಳಿಸಿದ್ದಾರೆ.

ತಂಬಾಕು ವ್ಯಾಪಾರಿಗಳು ಲೈಸನ್ಸ್ ಹೊಂದಿರುವುದು ಕಡ್ಡಾಯ ಎಂಬ ಜಾಗೃತಿ ಮೂಡಿಸಲಿದ್ದೇವೆ ಎಂದು ಪೊಲೀಸ್ ಆಯುಕ್ತ ಬಿ. ದಯಾನಂದ್ ತಿಳಿಸಿದರು.

## ಬಾದುಷ



**ಬೇಕಾಗುವ ಪದಾರ್ಥಗಳು :**

ಮೈದಾ ಹಿಟ್ಟು – 3 ಕಪ್
ತುಪ್ಪ – 5 ಚಮಚ
ಸಕ್ಕರೆ – 1 ಕಪ್
ಏಲಕ್ಕಿ ಪುಡಿ – ಚಿಟಿಕೆ
ಉಪ್ಪು ರುಚಿಗೆ ತಕ್ಕಷ್ಟು
ಕರಿಯಲು ಎಣ್ಣೆ

**ಮಾಡುವ ವಿಧಾನ :**

ಒಂದು ಪಾತ್ರೆಯಲ್ಲಿ ಮೈದಾ ಹಿಟ್ಟು, ಉಪ್ಪು ಮತ್ತು ತುಪ್ಪ ಹಾಕಿ ಕಲಸಿ. ಸ್ವಲ್ಪ ಸ್ವಲ್ಪವೇ ನೀರು ಹಾಕುತ್ತಾ ಮೃದುವಾದ ಚಪಾತಿ ಹಿಟ್ಟಿನ ಹದಕ್ಕೆ ಕಲಸಬೇಕು ಹಾಗೆ ನಿಂಬೆ ಹಣ್ಣಿನ ಗಾತ್ರದ ಉಂಡೆ ಮಾಡಿ ಸ್ವಲ್ಪ ಚಪ್ಪಟೆಯಾಕಾರ ಮಾಡಿ ಇಟ್ಟುಕೊಳ್ಳಬೇಕು. ಈಗ 1ಕಪ್ ಸಕ್ಕರೆಗೆ 1/2 ಕಪ್ ನೀರು ಹಾಕಿ, ಏಲಕ್ಕಿ ಪುಡಿ ಸೇರಿಸಿ ಒಂದೆಳೆ ಪಾಕ ಮಾಡಿಕೊಳ್ಳಬೇಕು. ಬಾಣಲೆಯಲ್ಲಿ ಎಣ್ಣೆ ಬಿಸಿ ಮಾಡಿ. ನಂತರ ಚಪ್ಪಟೆಯಾಕಾರದ ಉಂಡೆಯನ್ನು ಬಿಸಿಯಾದ ಎಣ್ಣೆಯಲ್ಲಿ ಹಾಕಿ ಮಧ್ಯಮ ಉರಿಯಲ್ಲಿ ಕಾಯಿಸಿ. ಬಿಸಿಯಾದ ಸಕ್ಕರೆ ಪಾಕದಲ್ಲಿ ಅದ್ದಿ ತೆಗೆದರೆ ರುಚಿಯಾದ ಬಾದುಷ ಸವಿಯಲು ಸಿದ್ದ.

## ವಿದೇಶಿ ವಿದ್ಯಾರ್ಥಿಗಳಿಗೆ ವೀಸಾ ಅಮಾನತು!



ವಾಷಿಂಗ್ಟನ್: ಅಮೆರಿಕದಲ್ಲಿ ವಿದ್ಯಾಭ್ಯಾಸ ಮಾಡಲು ಮುಂದಾಗುವ ವಿದೇಶಿ ವಿದ್ಯಾರ್ಥಿಗಳಿಗೆ ಹೊಸ ವೀಸಾ ಸಂದರ್ಶನಗಳನ್ನು ವಿದೇಶಾಂಗ ಇಲಾಖೆ ಸ್ಥಗಿತಗೊಳಿಸಿದೆ. ಆದರೆ, ಸಾಮಾಜಿಕ ಮಾಧ್ಯಮದ ಸ್ಕ್ರೀನಿಂಗ್ ಮಾಡಲು ಮುಂದಾಗಿರುವ ಹಿನ್ನಲೆ ಈ ಕ್ರಮ ವಿಸ್ತರಿಸಲು ಸಿದ್ಧತೆ ನಡೆಸುತ್ತಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ವಿದೇಶಿ ವಿದ್ಯಾರ್ಥಿಗಳ ಈ ವೀಸಾ ರದ್ದತಿ ಅಮಾನತು ತಾತ್ಕಾಲಿಕವಾಗಿದ್ದು, ಈಗಾಗಲೇ ವೀಸಾ ಸಂದರ್ಶನಕ್ಕೆ ಸಮಯ ನಿಗದಿಪಡಿಸಿಕೊಂಡಿರುವ ಅರ್ಜಿದಾರರಿಗೆ ಅನ್ವಯಿಸುವುದಿಲ್ಲ ಎಂದು ತಿಳಿಸಿದ್ದಾರೆ.

## ಫ್ರಾನ್ಸ್‌ನಲ್ಲಿ ದಯಾಮರಣ ಮಸೂದೆ ಅಂಗೀಕಾರ!



ಫ್ರಾನ್ಸ್: ಜೀವನ ಅಂತ್ಯ ಮಾಡಿಕೊಳ್ಳುವುದಕ್ಕಾಗಿ ಕಾನೂನುಬದ್ಧ ಆಯ್ಕೆ ಕಲ್ಪಿಸುವಂತೆ ಯುರೋಪಿನಾದ್ಯಂತ ಸಾರ್ವಜನಿಕ ಬೇಡಿಕೆಗಳು ಹೆಚ್ಚುತ್ತಿವೆ. ಗುಣಪಡಿಸಲಾಗದ ಅನಾರೋಗ್ಯದಿಂದ ಬಳಲುತ್ತಿರುವ ವಯಸ್ಕರು ಮಾರಕ ಔಷಧಗಳನ್ನು ತೆಗೆದುಕೊಳ್ಳಲು ಅವಕಾಶ ನೀಡುವಂತೆ ಒತ್ತಾಯಿಸುತ್ತಲೇ ಇದ್ದಾರೆ. ಹೆಚ್ಚೆಚ್ಚು ಒತ್ತಾಯ ಕೇಳಿ ಬರುತ್ತಿರುವ ಹೊತ್ತಲ್ಲೇ ಇಂತಹದೊಂದು ದಯಾಮರಣದ ವಿಧೇಯಕಕ್ಕೆ ಫ್ರಾನ್ಸ್‌ನ ಕೆಳಮನೆ ಅಂಗೀಕಾರ ನೀಡಿದೆ. ರಾಷ್ಟ್ರೀಯ ಅಸೆಂಬ್ಲಿಯಲ್ಲಿ ದೀರ್ಘ–ಚರ್ಚೆ ನಡೆದು ಮತಕ್ಕೆ ಹಾಕಲಾಯಿತು. ಈ ಮೂಲಕ ಪ್ರಮುಖ ವಿಚಾರವಾಗಿ ಮಂಡಿಸಲಾಗದ ವಿಧೇಯಕಕ್ಕೆ ಅಂಗೀಕಾರ ಸಿಕ್ಕಿದೆ. ಮಸೂದೆ ಕಾನೂನಾಗುವ ಮೊದಲು ಇತರ ಪ್ರಕ್ರಿಯೆಗಳು ಬಾಕಿ ಉಳಿದಿವೆ.

## ಮೇಲೆ ಶೇ 50ರಷ್ಟು ತೆರಿಗೆ ಬೆದರಿಕೆಯೊಡ್ಡಿದ ಟ್ರಂಪ್



ಅಮರಿಕ: ಯುರೋಪಿಯನ್ ಒಕ್ಕೂಟದ ರಾಷ್ಟ್ರಗಳೊಂದಿಗೆ ಮಾತುಕತೆಗೆ ವಿಳಂಬ ಮಾಡುತ್ತಿದ್ದಾರೆ ಎಂಬ ಕಾರಣ ಮುಂದಿಟ್ಟು ಕೊಂಡು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್, ಜೂನ್ 1ರಿಂದ ಜುಲೈ 9ರವರೆಗೆ ಯುರೋಪಿಯನ್ ಒಕ್ಕೂಟದ ಸರಕುಗಳ ಮೇಲೆ ಶೇ 50 ಸುಂಕವನ್ನು ಹಾಕುವುದಾಗಿ ಶುಕ್ರವಾರ ಬೆದರಿಕೆ ಹಾಕಿದ್ದಾರೆ. ಟ್ರಂಪ್ ಅವರ ಈ ಬೆದರಿಕೆ ಬಳಿಕ ಸುಂಕಗಳ ಬಗ್ಗೆ ಯುರೋಪಿಯನ್ ಒಕ್ಕೂಟ ಗಂಭೀರ ಮಾತುಕತೆ ನಡೆಸುತ್ತೇವೆ ಎಂದು ಯುರೋಪಿಯನ್ ಆಯೋಗದ ಅಧ್ಯಕ್ಷೆ ಉರ್ಸುಲಾ ವಾನ್ ಡೆರ್ ಲೇಯೆನ್ ಟ್ರಂಪ್‌ಗೆ ಭರವಸೆ ನೀಡಿದ್ದಾರೆ. ಹೀಗಂತಾ ಅಮೆರಿಕ ಅಧ್ಯಕ್ಷರು ಹೇಳಿಕೊಂಡಿದ್ದಾರೆ.

## DOGE ಸ್ಥಾನದಿಂದ ನಿರ್ಗಮಿಸಿದ ಎಲೋನ್ ಮಸ್ಕ್?



ವಾಷಿಂಗ್ಟನ್ ಡಿ.ಸಿ.: ಅಧಿಕಾರಿಶಾಹಿ ಸಿಬ್ಬಂದಿ ಕಡಿಮೆ ಮಾಡಲು ಹಾಗೂ ಈ ಬಗ್ಗೆ ಕೂಲಂಕಷ ಪ್ರಯತ್ನಗಳನ್ನು ಮುನ್ನಡೆಸಿದ ನಂತರ ಎಲೋನ್ ಮಸ್ಕ್, ಟ್ರಂಪ್ ಆಡಳಿತದ ಉನ್ನತ ಸಲಹೆಗಾರ ಹುದ್ದೆಯನ್ನು ತೊರೆದಿದ್ದಾರೆ ಎಂಬುದಾಗಿ ವರದಿ ಮಾಡಿದೆ. ಇದೇ ವೇಳೆ, ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಆಡಳಿತದಲ್ಲಿನ ವೆಚ್ಚ ಕಡಿತ ಕಾರ್ಯಪಡೆಯ ನೇತೃತ್ವ ವಹಿಸಿದ್ದ ತಮ್ಮ ಸಮಯ "ಮುಗಿಯುತ್ತಿದೆ" ಎಂದು ಬಿಲಿಯನೇರ್ ಎಲೋನ್ ಮಸ್ಕ್ ಕೂಡಾ ತಮ್ಮ ಎಕ್ಸ್ ಹ್ಯಾಂಡಲ್ ಪೋಸ್ಟ್ ಮೂಲಕ ಹೇಳಿದ್ದಾರೆ. ಈ ಅವಕಾಶ ನೀಡಿದ್ದಕ್ಕಾಗಿ ಡೊನಾಲ್ಡ್ ಟ್ರಂಪ್ ಅವರಿಗೆ ಧನ್ಯವಾದವನ್ನೂ ತಿಳಿಸಿದ್ದಾರೆ.

## ಹಮಾಸ್‌ನ ಶಂಕಿತ ಮುಖ್ಯಸ್ಥ ಮೊಹಮ್ಮದ್ ಸಿನ್ವಾರ್ ಹತ್ಯೆ



ಜೆರುಸಲೆಮ್: ಗಾಜಾದಲ್ಲಿ ಹಮಾಸ್‌ನ ಶಂಕಿತ ನಾಯಕ ಮತ್ತು ಹತ್ಯೆಗೀಡಾದ ಮಾಜಿ ಮುಖ್ಯಸ್ಥ ಯಾಹ್ಯಾ ಸಿನ್ವಾರ್ ಅವರ ಸಹೋದರ ಮೊಹಮ್ಮದ್ ಸಿನ್ವಾರ್ ಅವರನ್ನು ಸೇನೆ ಕೊಂದಿದೆ ಎಂದು ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಹೇಳಿದ್ದಾರೆ. ಯುದ್ಧ ಕಾಲದ ಈ 600 ದಿನಗಳಲ್ಲಿ ನಾವು ನಿಜವಾಗಿಯೂ ಮಧ್ಯಪ್ರಾಚ್ಯದ ಮುಖವನ್ನು ಬದಲಾಯಿಸಿದ್ದೇವೆ ಎಂದು ನೆತನ್ಯಾಹು ಸಂಸತ್ತಿನಲ್ಲಿ ಹೇಳಿದ್ದಾರೆ. ಮೇ 13 ರಂದು ದಕ್ಷಿಣ ಗಾಜಾ ನಗರವಾದ ಖಾನ್ ಯೂನಿಸ್‌ನಲ್ಲಿ ಇಸ್ರೇಲ್ ವಾಯು ದಾಳಿಯಲ್ಲಿ ಸಿನ್ವಾರ್ ಗುರಿಯಾಗಿಸಿಕೊಂಡು ದಾಳಿ ಮಾಡಲಾಗಿತ್ತು ಎಂದು ಇಸ್ರೇಲಿ ಮಾಧ್ಯಮ ವರದಿ ಮಾಡಿತ್ತು.

## ಚೀನಾ ನೈಋತ್ಯ ಪ್ರಾಂತ್ಯದಲ್ಲಿ ಭೂಕುಸಿತ



ಚೀನಾ: ನೈಋತ್ಯ ಚೀನಾದ ಗುಯಿಝೌ ಪ್ರಾಂತ್ಯದ ದಫಾಂಗ್ ಕೌಂಟಿಯಲ್ಲಿರುವ ಚಾಂಗ್ಶಿ ಮತ್ತು ಗುವಾ ಪಟ್ಟಣಗಳಲ್ಲಿ ಸಂಭವಿಸಿದ ಭೂಕುಸಿತದಲ್ಲಿ ಸುಮಾರು 12 ಜನರು ಸಿಲುಕಿಕೊಂಡಿದ್ದಾರೆ. ಪ್ರಸ್ತುತ ಶೋಧ ಹಾಗೂ ರಕ್ಷಣಾ ಕಾರ್ಯಾಚರಣೆಗಳು ನಡೆಯುತ್ತಿವೆ ಎಂದು ಸ್ಥಳೀಯ ಅಧಿಕಾರಿಗಳು ಮಾಧ್ಯಮಗಳಿಗೆ ತಿಳಿಸಿದ್ದಾರೆ. ಪೊಲೀಸರು, ಅಗ್ನಿಶಾಮಕ ದಳದ ಸಿಬ್ಬಂದಿ, ತುರ್ತು ಪ್ರತಿಕ್ರಿಯೆ ನೀಡುವವರು ಸ್ಥಳಕ್ಕೆ ಧಾವಿಸಿದ್ದು, ಶೋಧ ಹಾಗೂ ರಕ್ಷಣಾ ಕಾರ್ಯಾಚರಣೆ ಮುಂದುವರಿಸಿದ್ದಾರೆ. ಸ್ನಿಫರ್ ನಾಯಿಗಳು, ಲೈಫ್ ಡಿಟೆಕ್ಟರ್ಸ್, ಡ್ರೋನ್‌ಗಳು, ಇತರ ಸಂಬಂಧಿತ ಪರಿಕರಗಳ ಸಹಾಯದಿಂದ ಸಿಬ್ಬಂದಿ ರಕ್ಷಣಾ ಕಾರ್ಯಾಚರಣೆ ನಡೆಸುತ್ತಿದ್ದಾರೆ.

## ಏಷ್ಯನ್ ಅಥ್ಲೆಟಿಕ್ ಚಾಂಪಿಯನ್‌ಷಿಪ್ ಚಿನ್ನ ಗೆದ್ದ ಗುಲ್ವೀರ್ ಸಿಂಗ್



ದಕ್ಷಿಣ ಕೊರಿಯಾ : ರಾಷ್ಟ್ರೀಯ ದಾಖಲೆ ಹೊಂದಿರುವ ಗುಲ್ವೀರ್ ಸಿಂಗ್ ಅವರು ಪುರುಷರ 10,000 ಮೀ. ಓಟದಲ್ಲಿ ಅಗ್ರಸ್ಥಾನ ಪಡೆದು ಏಷ್ಯನ್ ಅಥ್ಲೆಟಿಕ್ಸ್ ಚಾಂಪಿಯನ್‌ಷಿಪ್‌ನಲ್ಲಿ ಭಾರತಕ್ಕೆ ಮೊದಲ ದಿನವೇ ಚಿನ್ನ ಗೆದ್ದುಕೊಟ್ಟರು. ಪುರುಷರ 20 ಕಿ.ಮೀ. ರೇಸ್ ವಾಕ್ ಸ್ಪರ್ಧೆಯಲ್ಲಿ ಸೆರ್ವಿನ್ ಸೆಬಾಸ್ಟಿಯನ್ ಕಂಚಿನ ಪದಕ ಗೆದ್ದುಕೊಂಡರು. 2023ರ ಹಾಂಗ್‌ಝು ಏಷ್ಯನ್ ಗೇಮ್ಸ್‌ನಲ್ಲಿ ಕಂಚಿನ ಪದಕ ಗೆದ್ದಿದ್ದ 26 ವರ್ಷ ವಯಸ್ಸಿನ ಗುಲ್ವೀರ್ ಇಲ್ಲಿ ಸ್ಪರ್ಧೆ ಗೆಲ್ಲುವ ನೆಚ್ಚಿನ ಸ್ಪರ್ಧಿಯಾಗಿದ್ದು 28 ನಿಮಿಷ 38.63 ಸೆಕೆಂಡುಗಳಲ್ಲಿ ನಿಗದಿತ ದೂರವನ್ನು ಕ್ರಮಿಸಿದರು. ಇದು ಏಷ್ಯನ್ ಚಾಂಪಿಯನ್‌ಷಿಪ್‌ನಲ್ಲಿ ಅವರಿಗೆ ಮೊದಲ ಚಿನ್ನ.

## ಎ. ದೀಪಕ್ ಮತ್ತು ಜೆನ್ನಿಫರ್ ಲುಯಿಖಮ್‌ಗೆ ಸಿಂಗಲ್ಸ್ ಪ್ರಶಸ್ತಿ



ಬೆಂಗಳೂರು: ಕರ್ನಾಟಕದ ಎ.ದೀಪಕ್ ಮತ್ತು ಮಣಿಪುರದ ಜೆನ್ನಿಫರ್ ಲುಯಿಖಮ್ ಅವರು ಎಐಟಿಎ ಟಿಎನ್‌ಆರ್ ಸ್ಮರಣಾರ್ಥ ಆಲ್ ಇಂಡಿಯಾ ಬ್ಯಾಂಕಿಂಗ್ ಟೆನಿಸ್ ಟೂರ್ನಿಯಲ್ಲಿ ಕ್ರಮವಾಗಿ ಪುರುಷರ ಮತ್ತು ಮಹಿಳೆಯರ ಸಿಂಗಲ್ಸ್ ಪ್ರಶಸ್ತಿಯನ್ನು ಮುಡಿಗೇರಿಸಿಕೊಂಡರು. ಇಲ್ಲಿನ ಟಾಪ್‌ಸ್ಪಿನ್ ಟೆನಿಸ್ ಅಕಾಡೆಮಿ ಕೋರ್ಟ್‌ನಲ್ಲಿ ನಡೆದ ಫೈನಲ್ ಹಣಾಹಣಿಯಲ್ಲಿ ಮೂರನೇ ಶ್ರೇಯಾಂಕದ ದೀಪಕ್ 6–4, 3–2ರಿಂದ ಆರನೇ ಶ್ರೇಯಾಂಕದ ರಿಷಿ ರೆಡ್ಡಿ ಅವರನ್ನು ಮಣಿಸಿದರು.

## ಸೇನಾ ಕ್ಯಾಂಟೀನ್ ಮದ್ಯದ ಮೇಲೆ ತೆರಿಗೆ ಹೆಚ್ಚಳ ಇಲ್ಲ : ಸಿಎಂ



ಬೆಂಗಳೂರು: ಸೇನಾ ಕ್ಯಾಂಟೀನ್‌ಗೆ ಅಬಕಾರಿ ಸುಂಕ ವಿಧಿಸುವುದಿಲ್ಲ ಎಂದು ಮುಖ್ಯಮಂತ್ರಿ ಸಿದ್ಧರಾಮಯ್ಯ ಘೋಷಿಸಿದ್ದಾರೆ. ಕೆಪಿಸಿಸಿಯ ಮಾಜಿ ಸೈನಿಕ ವಿಭಾಗದ ವತಿಯಿಂದ ನಗರದ ಪುಟ್ಟಣ್ಣಚೆಟ್ಟಿ ಪುರಭವನದಲ್ಲಿ ಆಯೋಜಿಸಿದ್ದ ಬೃಹತ್ "ಜೈ ಹಿಂದ್ ಸಭಾ" ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ಅವರು, ನಿವೃತ್ತ ಯೋಧರ ಸಮೂಹವನ್ನು ಸನ್ಮಾನಿಸಿ, ಹುತಾತ್ಮ ಸೈನಿಕರ ಕುಟುಂಬದ ಸದಸ್ಯರನ್ನು ಸನ್ಮಾನಿಸಿ, ಮಾತನಾಡಿದರು. ಶಿಷ್ಟರ ರಕ್ಷಣೆ, ದುಷ್ಟರ ಸಂಹಾರದ ವಿಚಾರದಲ್ಲಿ ಭಾರತ ತನ್ನ ಇತಿಹಾಸದಲ್ಲೇ ಯಾವತ್ತೂ ರಾಜಿಯಾಗಿಲ್ಲ, ಮುಂದೆಯೂ ಆಗುವುದಿಲ್ಲ. ಇದು ಪ್ರತಿಯೊಬ್ಬ ಭಾರತೀಯರ ಬದ್ಧತೆ" ಎಂದು ಸಿದ್ಧರಾಮಯ್ಯ ಶ್ಲಾಘಿಸಿದರು.

## ರಾಜ್ಯಪಾಲರಿಂದ ಮೂರು ಸುಗ್ರೀವಾಜ್ಞೆಗಳಿಗೆ ಅಂಕಿತ



ಬೆಂಗಳೂರು: ಗಿಗ್ ಕಾರ್ಮಿಕರ ಸಾಮಾಜಿಕ ಭದ್ರತೆ ಕಲ್ಪಿಸುವ ಕರ್ನಾಟಕ ವೇದಿಕೆ ಆಧಾರಿತ ಗಿಗ್ ಕಾರ್ಮಿಕರ ಅಧ್ಯಾದೇಶ, 2025ಗೆ ರಾಜ್ಯಪಾಲರು ಅಂಕಿತ ಹಾಕಿದ್ದು, ರಾಜ್ಯ ಸರ್ಕಾರ ಇದೀಗ ಅಧಿಸೂಚನೆ ಹೊರಡಿಸಿದೆ. ಈ ಸುಗ್ರೀವಾಜ್ಞೆಯಿಂದ ಪ್ಲಾಟ್‌ಫಾರ್ಮ್ ಆಧಾರಿತ ಸ್ವಿಗ್ಗಿ, ಜೊಮಾಟೊಗಳಲ್ಲಿ ಫುಡ್ ಡೆಲವರಿ ಮಾಡುವ, ರೈಡ್‌ಶೇರಿಂಗ್ ಸೇವೆಗಳಾದ ಓಲಾ,ಉಬರ್,ರ್‍ಯಾಪಿಡೋ ಇತ್ಯಾದಿ ಅಪ್ಲಿಕೇಷನ್ ಆಧಾರಿತ ಚಾಲಕರು ಮತ್ತಿತ್ತರ ಕ್ಷೇತ್ರಗಳಲ್ಲಿ ಪೂರ್ಣಕಾಲಿಕ/ಅರೆಕಾಲಿಕ ಡೆಲವರಿ ನೌಕರರಾಗಿ ಕಾರ್ಯನಿರ್ವಹಿಸುತ್ತಿರುವ ಕಾರ್ಮಿಕರು, ಕಾರ್ಮಿಕ ಕಾನೂನುಗಳಡಿ ಸಾಮಾಜಿಕ ಭದ್ರತಾ ಸೌಲಭ್ಯಗಳನ್ನು ಪಡೆಯಲಿದ್ದಾರೆ.

## ಉತ್ತಮ ಮಳೆ, ರೈತರಿಂದ ಕೃಷಿ ಚಟುವಟಿಕೆಗಳಿಗೆ ಚುರುಕು



ಬಳ್ಳಾರಿ: ಜಿಲ್ಲೆಯಲ್ಲಿ ಕಳೆದ ಒಂದು ವಾರದಿಂದ ಉತ್ತಮ ಮಳೆಯಾಗುತ್ತಿದ್ದು, ರೈತರು ಕೃಷಿ ಚಟುವಟಿಕೆಗಳಿಗೆ ಚುರುಕು ನೀಡಿದ್ದಾರೆ. ಮಾಗಿ ಹುಣ್ಣಿಮೆಯ ನಂತರ ರೈತರು ಕೊಟ್ಟಿಗೆ ಗೊಬ್ಬರ ಬೆರೆಸಿ ಭೂಮಿಯನ್ನು ಬಿತ್ತನೆಗೆ ಹದಗೊಳಿಸುತ್ತಿದ್ದರು. ಈಗ ಬಿದ್ದಿರುವ ಮಳೆಯಿಂದಾಗಿ ತೊಗರಿ, ಹತ್ತಿ, ಸಜ್ಜೆ, ನವಣೆ ಮತ್ತು ಸೂರ್ಯಕಾಂತಿ ಬಿತ್ತನೆಗೆ ಅನುಕೂಲಕರ ವಾತಾವರಣ ನಿರ್ಮಾಣವಾಗಿದೆ. ಕೃಷಿ ಇಲಾಖೆ ರಿಯಾಯಿತಿ ದರದಲ್ಲಿ ಬಿತ್ತನೆ ಬೀಜ ಪೂರೈಸಲು ಸಜ್ಜಾಗಿರುವುದರಿಂದಾಗಿ ಈ ವರ್ಷ ರೈತರಿಗೆ ಕೊರತೆಯಾಗುವುದಿಲ್ಲ" ಎಂದರು ಜಂಟಿ ಕೃಷಿ ನಿರ್ದೇಶಕ ಟಿ. ಸೋಮಸುಂದರ್ ಅವರು ಹೇಳಿದ್ದಾರೆ.

## ಫುಟ್‌ಪಾತ್ ವ್ಯಾಪಾರಿಗಳನ್ನು ತೆರವುಗೊಳಿಸಿ, ಅವರಿಗೆ ತಳ್ಳುವ ಗಾಡಿ



ಬೆಂಗಳೂರು : "ಸೆಪ್ಟೆಂಬರ್ 15ರ ಒಳಗಾಗಿ ಬಿಬಿಎಂಪಿ ವಿಭಜನೆ ಪ್ರಕ್ರಿಯೆ ಪೂರ್ಣಗೊಂಡು ಗ್ರೇಟರ್ ಬೆಂಗಳೂರು ಪ್ರಾಧಿಕಾರ ರಚನೆಯಾಗಲಿದೆ" ಎಂದು ಡಿಸಿಎಂ ಡಿ. ಕೆ. ಶಿವಕುಮಾರ್ ಅವರು ತಿಳಿಸಿದರು. ವಿಧಾನ ಸೌಧದಲ್ಲಿ ಗ್ರೇಟರ್ ಬೆಂಗಳೂರು ಸಭೆ ನಡೆಸಿದ ನಂತರ ಮಾತನಾಡಿದ ಅವರು," ವಿರೋಧ ಪಕ್ಷದ ನಾಯಕರು ಸೇರಿದಂತೆ ಇನ್ನೂ ಮೂರ್ನಾಲ್ಕು ಶಾಸಕರ ಜತೆ ಚರ್ಚೆ ಮಾಡುತ್ತೇನೆ. ಎಲ್ಲರ ಸಲಹೆ ಪಡೆದ ಬಳಿಕ ಸಚಿವ ಸಂಪುಟದಲ್ಲಿ ಪ್ರಸ್ತಾಪ ಮಾಡಿ ಅಂತಿಮ ತೀರ್ಮಾನ ಮಾಡಲಾಗುವುದು ಮೇ 15ರಿಂದ ಬಿಬಿಎಂಪಿಯನ್ನು ಗ್ರೇಟರ್ ಬೆಂಗಳೂರು ಪ್ರಾಧಿಕಾರ (ಬಿಜಿಎ) ಆಗಿ ಪರಿವರ್ತನೆಗೊಳ್ಳಲು ಅಧಿಸೂಚನೆ ಹೊರಡಿಸಲಾಗಿದೆ" ಎಂದರು.

## ಮಾಸ್ಕ್ ಧರಿಸಿ ಅಹವಾಲುಗಳನ್ನು ಸ್ವೀಕರಿಸಿದ ಮುಖ್ಯಮಂತ್ರಿ



ಮೈಸೂರು : ರಾಜ್ಯದಲ್ಲಿ ಮತ್ತೆ ಕೊರೊನಾ ಭೀತಿ ಶುರುವಾದ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಮಾಸ್ಕ್ ಧರಿಸಿಕೊಂಡು ಬಂದ ಜನರಿಂದ ಅಹವಾಲು ಸ್ವೀಕರಿಸಿದರು. ನಂತರ ಮಾಧ್ಯಮದವರೊಂದಿಗೆ ಮಾತನಾಡಿ, 2017ರಲ್ಲಿ ರಾಹುಲ್ ಗಾಂಧಿ ಅವರನ್ನು ಕರೆಸಿ ಇಂದಿರಾ ಕ್ಯಾಂಟೀನ್ ಆರಂಭಿಸಿದೆವು. ಆದರೆ, ನಂತರ ಬಂದ ಬಿಜೆಪಿ ಸರ್ಕಾರದ ಅವಧಿಯಲ್ಲಿ ಬಡವರ ಕ್ಯಾಂಟೀನ್‌ಗಳು ಸೊರಗಿದ್ದವು. ಈಗ ನಾವೇ ಮತ್ತೆ ಅಧಿಕಾರಕ್ಕೆ ಬಂದಿದ್ದರಿಂದ ಕ್ಯಾಂಟೀನ್‌ಗಳು ಜೀವ ಪಡೆದುಕೊಳ್ಳುತ್ತಿವೆ. ಈ ಭಾಗವಾಗಿ ಹಿನಕಲ್‌ನಲ್ಲೇ 8 ಇಂದಿರಾ ಕ್ಯಾಂಟೀನ್‌ಗಳನ್ನು ಉದ್ಘಾಟಿಸಿರುವುದು ಮಾತ್ರವಲ್ಲದೇ ಹೊಸದಾಗಿ ಇನ್ನೂ 184 ಕ್ಯಾಂಟೀನ್‌ಗಳನ್ನು ಬೇರೆ ಬೇರೆಡೆ ಆರಂಭಿಸುತ್ತಿದ್ದೇವೆ ಎಂದರು.

## ನೆಹರು ಆಧುನಿಕ ಭಾರತದ ನಿರ್ಮಾತೃ : ಸಿದ್ದರಾಮಯ್ಯ



ಬೆಂಗಳೂರು: ಸ್ವತಂತ್ರ ಭಾರತದ ಮೊದಲನೇ ಪ್ರಧಾನಿ ಜವಾಹರ್ ಲಾಲ್ ನೆಹರು ಅವರು ಆಧುನಿಕ ಭಾರತದ ನಿರ್ಮಾತೃ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ. ಅವರು ವಿಧಾನಸೌಧದ ಪೂರ್ವ ದ್ವಾರದ ಬಳಿ ಇರುವ ಮಾಜಿ ಪ್ರಧಾನ ಮಂತ್ರಿ ದಿವಂಗತ ಪಂಡಿತ್ ಜವಾಹರಲಾಲ್ ನೆಹರುರವರ ಪುಣ್ಯತಿಥಿಯ ಅಂಗವಾಗಿ ಅವರ ಪ್ರತಿಮೇ ಹಾಗೂ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಮಾತನಾಡಿ, ನೆಹರೂ ಅವರ ಪುಣ್ಯತಿಥಿಯನ್ನು ಸರ್ಕಾರ ಗೌರವ ಹಾಗೂ ಅಭಿಮಾನದಿಂದ ನೆರವೇರಿಸಿದೆ. ದೇಶದ ಬಡತನವನ್ನು ಹೋಗಲಾಡಿಸುವ ಪ್ರಾಮಾಣಿಕ ಪ್ರಯತ್ನವನ್ನು ಮಾಡಿದರು ಎಂದರು.

## ಡಿಎಂಕೆಯಿಂದ ನಟ ಕಮಲಹಾಸನ್‌ನನ್ನು ರಾಜ್ಯಸಭೆಗೆ



ತಮಿಳುನಾಡು: ಮಕ್ಕಳ್ ನೀಧಿ ಮಯ್ಯಮ್ (MNM) ಪಕ್ಷದ ಮುಖ್ಯಸ್ಥ ಹಾಗೂ ಬಹುಭಾಷಾ ನಟ ಕಮಲ್ ಹಾಸನ್ ಅವರನ್ನು ಡಿಎಂಕೆ ರಾಜ್ಯಸಭೆಗೆ ಕಳುಹಿಸಲು ಮುಂದಾಗಿದೆ. ಈ ಕುರಿತು ಅಧಿಕೃತ ಘೋಷಣೆ ಶೀಘ್ರದಲ್ಲೇ ಹೊರಬೀಳಲಿದೆ. ತಮಿಳುನಾಡಿನ 6 ರಾಜ್ಯ ಸಭಾ ಸ್ಥಾನಗಳಲ್ಲಿ ಒಂದು ಸ್ಥಾನಕ್ಕೆ ಕಮಲ್ ಹಾಸನ್ ಅವರನ್ನು ಡಿಎಂಕೆ ಕಣಕ್ಕಿಳಿಸಲಿದೆ ಎಂಬ ಮಾಹಿತಿ ಲಭ್ಯವಾಗಿದೆ. 6 ಸ್ಥಾನಗಳ ಪೈಕಿ ಡಿಎಂಕೆ ಮೈತ್ರಿಕೂಟದಿಂದ 4 ಅಭ್ಯರ್ಥಿಗಳು ಮತ್ತು ಎಐಎಡಿಎಂಕೆ ಮೈತ್ರಿಕೂಟದಿಂದ ಇಬ್ಬರು ಅಭ್ಯರ್ಥಿಗಳನ್ನು ಕಣಕ್ಕಿಳಿಸಲಾಗುತ್ತದೆ. ಓರ್ವ ಸದಸ್ಯನ ಗೆಲುವಿಗೆ 34 ಶಾಸಕರ ಬೆಂಬಲದ ಅಗತ್ಯವಿದೆ.

## ಕೋವಿಡ್ ಸೋಂಕು ಸಂಪೂರ್ಣವಾಗಿ ನಿರ್ಮೂಲನೆ ಆಗಿಲ್ಲ !



ನವದೆಹಲಿ: ದೇಶದಲ್ಲಿ ಕೋವಿಡ್ ಪ್ರಕರಣಗಳು ಮತ್ತೆ ಉಲ್ಬಣಗೊಳ್ಳುತ್ತಿವೆ. ಆದರೆ, ಈ ಹೊಸ ಕೋವಿಡ್ ತಳಿ ಬಗ್ಗೆ ಆತಂಕ ಬೇಡ. ಕೋವಿಡ್ 19 ಜೆಎನ್1 ರೂಪಾಂತರದ ಬಗ್ಗೆ ಆತಂಕಕ್ಕೆ ಒಳಗಾಗುವ ಯಾವುದೇ ಅಗತ್ಯವಿಲ್ಲ ಎಂದು ಭಾರತೀಯ ವೈದ್ಯಕೀಯ ಸಂಶೋಧನಾ ಮಂಡಳಿ ತಿಳಿಸಿದೆ. ಐಸಿಎಐಆರ್ ರೋಗ ನಿರ್ಮೂಲನಾ ವಿಭಾಗದ ಅಧ್ಯಕ್ಷ ಡಾ ರಜನಿಕಾಂತ್ ಶ್ರೀವಾಸ್ತವ, ಕೋವಿಡ್ 19 ಸೋಂಕು ಸಂಪೂರ್ಣವಾಗಿ ಹೋಗುವುದಿಲ್ಲ. ನಮ್ಮ ದೇಶದಲ್ಲಿ ಬಹುತೇಕ ಜನರು ಈಗಾಗಲೇ ಲಸಿಕೆ ಪಡೆದಿದ್ದು, ಸೋಂಕಿಗೆ ಒಡ್ಡಿಕೊಂಡಿರುವುದರಿಂದ ಭಯಪಡುವ ಅವಶ್ಯಕತೆ ಇಲ್ಲ.

## ಕ್ಯಾಲ್ಸಿಯಂ ಕಾರ್ಬೈಡ್ ತುಂಬಿದ್ದ ಹಡಗು ಮುಳುಗಡೆ



ಕೊಚ್ಚಿ: ಲೈಬೀರಿಯನ್ ಧ್ವಜ ಹೊಂದಿದ್ದ ಸರಕು ಸಾಗಣೆ ಹಡಗು ರವಿವಾರ ಬೆಳಗಿನ ಜಾವ ಕೊಚ್ಚಿಯಿಂದ ಸುಮಾರು 38 ನಾಟಿಕಲ್ ಮೈಲು ದೂರದಲ್ಲಿ ಮುಳುಗಡೆಯಾಗಿದೆ. ಇದರಿಂದಾಗಿ ಕೇರಳ ಕರಾವಳಿಯಲ್ಲಿ ಭಾರೀ ಪ್ರಮಾಣದ ತೈಲ ಮತ್ತು ರಾಸಾಯನಿಕ ಸೋರಿಕೆ ಭೀತಿ ಪರಿಸರ ಅಪಾಯ ಎದುರಾಗಿದೆ. ಮುಳುಗಡೆಯಾದ ಹಡಗಿನಲ್ಲಿ 84.44 ಮೆಟ್ರಿಕ್ ಟನ್ ಡೀಸೆಲ್, 367.1 ಮೆಟ್ರಿಕ್‌ಟನ್ ಫರ್ನೇಸ್ ಆಯಿಲ್‌ನ 640 ಕಂಟೇನರ್‌ಗಳನ್ನು ಸಾಗಿಸಲಾಗುತ್ತಿತ್ತು. ಅಪಾಯಕಾರಿ ಸರಕು ಮತ್ತು 1. 13 ಕರ್ಬೈಡ್ ಹೊಂದಿರುವ ಕಂಟೇನರ್‌ಗಳೂ ಸೇರಿರುವುದು ಆತಂಕಕ್ಕೆ ಕಾರಣವಾಗಿದೆ.

## IRCTCಯಿಂದ ಭಾರತ್–ಭೂತನ್ ಮಿಸ್ಟಿಕ್ ಪರ್ವತ ಪ್ರವಾಸ



ನವದೆಹಲಿ: ಪ್ರವಾಸೋದ್ಯಮ ಉತ್ತೇಜಿಸಲು ಭಾರತದ ವಿವಿಧ ಸ್ಥಳಗಳಿಗೆ ಮತ್ತು ನೆರೆಯ ದೇಶಗಳಿಗೆ ಭೇಟಿ ನೀಡುವ ಅವಕಾಶವನ್ನು ಒದಗಿಸಲು, IRCTC ಅತ್ಯಾಕರ್ಷಕ ಭಾರತ್ – ಭೂತಾನ್ ಮಿಸ್ಟಿಕ್ ಪರ್ವತ ಪ್ರವಾಸವನ್ನು ದೇಶದ ಜನರಿಗೆ ಪರಿಚಯಿಸುತ್ತಿದೆ. ಭಾರತ್ ಗೌರವ್ ರೈಲುಗಳಲ್ಲಿ ಪ್ರವಾಸಿಗರಿಗೆ ಈ ಸೌಲಭ್ಯ ಕಲ್ಪಿಸಲಾಗಿದೆ. ಭಾರತಮತ್ತು ನೇಪಾಳ ಸಂಪರ್ಕಿಸುವ ಈ ವಿಶಿಷ್ಟ ರೈಲು ಜೂನ್ 28ರಿಂದ ತನ್ನ ಯಾನ ಆರಂಭಿಸಲಿದೆ. 'ಭಾರತ್–ಭೂತಾನ್ ಮಿಸ್ಟಿಕ್ ಮೌಂಟೇನ್ ಟೂರ್' ಮೂಲಕ ನೆರೆಯ ರಾಷ್ಟ್ರ ಭೂತಾನ್ ನೊಂದಿಗೆ ಸಂಪರ್ಕಿಸುವ ಮತ್ತೊಂದು ವಿಶಿಷ್ಟ ಪ್ರವಾಸವನ್ನು ಯಶಸ್ವಿಗಳಿಸಲು IRCTC ಸಜ್ಜಾಗಿದೆ.

## ಸಶಸ್ತ್ರ ಪಡೆಗಳ ಶೌರ್ಯ, ಪ್ರಧಾನಿ ಮೋದಿ ನಾಯಕತ್ವ ಶ್ಲಾಘಣೆ




ನವದೆಹಲಿ: ಪಹಲ್ಗಾಮ್ ಉಗ್ರ ದಾಳಿಗೆ ಪ್ರತಿಯಾಗಿ ಭಾರತೀಯ ಸೇನೆ ನಡೆಸಿದ ಆಪರೇಷನ್ ಸಿಂಧೂರ ಕಾರ್ಯಾಚರಣೆಗೆ ಇಡೀ ದೇಶವೇ ಹಾಡಿ ಹೊಗಳುತ್ತಿದೆ. ಬಿಜೆಪಿ ನೇತೃತ್ವದ ಎನ್‌ಡಿಎ ಮುಖ್ಯಮಂತ್ರಿಗಳು ಮತ್ತು ಉಪ ಮುಖ್ಯಮಂತ್ರಿಗಳ ಸಭೆಯಲ್ಲಿ ಸಶಸ್ತ್ರ ಪಡೆಗಳ ಶೌರ್ಯ ಮತ್ತು ಪ್ರಧಾನಿ ನರೇಂದ್ರ ಮೋದಿಯವರ ನಾಯಕತ್ವವನ್ನು ಶ್ಲಾಘಿಸುವ ನಿರ್ಣಯವನ್ನು ಅಂಗೀಕರಿಸಲಾಗಿದೆ. ಅಮಿತ್ ಶಾ, ರಾಜನಾಥ್ ಸಿಂಗ್ ಮತ್ತು ಬಿಜೆಪಿ ರಾಷ್ಟ್ರಾಧ್ಯಕ್ಷ ಜೆಪಿನಡ್ಡಾ, ಎನ್‌ಡಿಎ ಕೂಟದ 19 ಮುಖ್ಯಮಂತ್ರಿಗಳು ಸಮಾವೇಶದಲ್ಲಿ ಭಾಗವಹಿಸಿದ್ದರು.

## ರಾಜ್ಯ ವಿಕಸಿತವಾದಾಗ, ಭಾರತವು ವಿಕಸಿತವಾಗುತ್ತದೆ : ಮೋದಿ



ನವದೆಹಲಿ: ವಿಕಸಿತ ಭಾರತ ಪ್ರತಿಯೊಬ್ಬ ಭಾರತೀಯನ ಗುರಿಯಾಗಿದೆ. ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಟೀಮ್ ಇಂಡಿಯಾದಂತೆ ಒಟ್ಟಾಗಿ ಕೆಲಸ ಮಾಡಿದರೆ, ಯಾವುದೇ ಗುರಿ ಅಸಾಧ್ಯವಲ್ಲ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ಭಾರತ್ ಮಂಟಪದಲ್ಲಿ ನಡೆದ ನೀತಿ ಆಯೋಗದ 10ನೇ ಆಡಳಿತ ಮಂಡಳಿ ಸಭೆಯ ಅಧ್ಯಕ್ಷತೆ ವಹಿಸಿದ್ದರು.



ಕರಾವಳಿ ತರಂಗಿಣಿ
# ಕಲಾ ತರಂಗಿಣಿ



## ಅಶ್ವಿನ್‌ಗೆ ಆರ್ಯಭಟ ಅಂತರಾಷ್ಟ್ರೀಯ ಪ್ರಶಸ್ತಿ-2025

ಸಂಗೀತ ಸಂಯೋಜಕ ಮತ್ತು ಗಾಯಕ ಅಶ್ವಿನ್ ಪಿ ಕುಮಾರ್ ಅವರಿಗೆ ಆರ್ಯಭಟ ಸಾಂಸ್ಕೃತಿಕ ಸಂಸ್ಥೆಯಿಂದ ಆರ್ಯಭಟ ಅಂತರಾಷ್ಟ್ರೀಯ ಪ್ರಶಸ್ತಿ 2025ನ್ನು ಬೆಂಗಳೂರು ರವೀಂದ್ರ ಕಲಾಕ್ಷೇತ್ರದಲ್ಲಿ ನಡೆದ ಹಿರಿಯರತ್ನ ಚಿನ್ನದ ಹಬ್ಬದ ಸಮಾರಂಭದಲ್ಲಿ ಪ್ರದಾನ ಮಾಡಲಾಯಿತು. ಈ ಪ್ರಶಸ್ತಿ, ಸಂಗೀತ ಕ್ಷೇತ್ರದಲ್ಲಿನ ಅವರ ಅತ್ಯುತ್ತಮ ಸಾಧನೆ ಹಾಗೂ ಖತರ್‌ನಲ್ಲಿರುವ ಭಾರತೀಯ ಸಮುದಾಯದೊಂದಿಗೆ ಅವರ ಸಾಂಸ್ಕೃತಿಕ ಸೇವೆಗೆ ಇನ್ನು ಗೌರವಿಸುತ್ತದೆ. ಅಶ್ವಿನ್ ಸಂಗೀತ ಸಂಯೋಜಿಸಿದ ವನ್ಯಜೀವಿ ಡಾಕ್ಯುಮೆಂಟರಿ 'ಕಪ್ಪೆ ರಾಗ', 2023ರಲ್ಲಿ ಜ್ಯಾಕ್ಸನ್ ವೈಲ್ಡ್ ಮೀಡಿಯಾ ಪ್ರಶಸ್ತಿ (ಹಸಿರು ಆಸ್ಕರ್)ಗೆ ಪಾತ್ರವಾಯಿತು. ಈ ಗೌರವಕ್ಕೆ ಪಾತ್ರವಾದ ಮೊದಲ ಕನ್ನಡ ಭಾಷೆಯ ಚಿತ್ರವಾಗಿದೆ. ಅವರ ಸಂಗೀತಪ್ರಯಾಣದಲ್ಲಿ 'ಮೇಡ್ ಇನ್ ಬೆಂಗಳೂರು' ಮತ್ತು 'ಚೌಕಬಾರಾ' ಚಿತ್ರಗಳು ಸೇರಿದ್ದು, ಹಲವಾರು ಆಲ್ಬಮ್‌ಗಳು, ಹ್ರಸ್ವ ಚಿತ್ರಗಳು ಮತ್ತು ಜಾಗತಿಕ ಕಾರ್ಯಕ್ರಮಗಳಲ್ಲಿ ಪ್ರದರ್ಶನಗಳಿವೆ. ತಮ್ಮ ಸಂಗೀತ ಸೇವೆಗೆ ಹಲವು ಪ್ರಶಸ್ತಿಗಳನ್ನು ಪಡೆದಿದ್ದಾರೆ. ವೃತ್ತಿಜೀವನದ ಒತ್ತಡದ ನಡುವೆಯೂ, ಅಶ್ವಿನ್ ತಮ್ಮ ಕೆಲಸ, ಸಂಗೀತಾಭಿರುಚಿ ಹಾಗೂ ಸಮಾಜ ಸೇವೆಯನ್ನು ಸಮತೋಲನದಿಂದ ನಿರ್ವಹಿಸುತ್ತಿದ್ದು, ಕಲೆ ಮತ್ತು ಕೃತಿಯಿಂದ ಜನಮನ ಗೆಲ್ಲುತ್ತಿದ್ದಾರೆ.




## 'ಸೆಪ್ಟೆಂಬರ್ 21' ಬಾಲಿವುಡ್ ಚಿತ್ರಕ್ಕೆ ಇಂದ್ರಜಿತ್ ಲಂಕೇಶ್ ಅವರಿಂದ ಚಾಲನೆ

ಆಲ್ಝೈಮರ್ ರೋಗದ ಕಥಾಚಿತ್ರದಲ್ಲಿ ಪ್ರಿಯಾಂಕ ಉಪೇಂದ್ರ ನಟನೆ. 21 ವರ್ಷದ ಕನ್ನಡತಿ ಕರೆನ್ ಕ್ಷಿತಿ ಸುವರ್ಣ ಇದೀಗ 'ಸೆಪ್ಟೆಂಬರ್ 21' ಹೆಸರಿನ ಬಾಲಿವುಡ್ ಸಿನಿಮಾ ನಿರ್ದೇಶಿಸುತ್ತಿದ್ದಾರೆ. ಆಲ್ಝೈಮರ್ ರೋಗಿ ಮತ್ತು ಆತನ ಆರೈಕೆ ಮಾಡುವ ನರ್ಸ್‌ವೊಬ್ಬಳ ನಡುವಿನ ಕಥೆಯನ್ನು ಹೊಂದಿರುವ ಈ ಚಿತ್ರದ ಮುಹೂರ್ತ ಸಮಾರಂಭ ಇತ್ತೀಚೆಗೆ ಮಹಾಲಕ್ಷ್ಮಿ ಲೇಔಟ್‌ನ ಪಂಚಮುಖಿ ಗಣಪತಿ ದೇವಸ್ಥಾನದಲ್ಲಿ ನೆರವೇರಿತು. ಪತ್ರಕರ್ತ, ನಟ, ನಿರ್ದೇಶಕ ಇಂದ್ರಜಿತ್ ಲಂಕೇಶ್ ಚಿತ್ರದ ಮೊದಲ ಸನ್ನಿವೇಶಕ್ಕೆ ಆರಂಭ ಫಲಕ ತೋರುವ ಮೂಲಕ ಚಾಲನೆ ನೀಡಿದರು. ಚಿತ್ರತಂಡದ ಸದಸ್ಯರು ಹಾಗೂ ಗಣ್ಯರು ಸಮಾರಂಭದಲ್ಲಿ ಉಪಸ್ಥಿತರಿದ್ದರು. ನಂತರ ಚಿತ್ರತಂಡದ ಸದಸ್ಯರು ಮಾತನಾಡಿದರು. ನಾನು ಈ ಹಿಂದೆ 'ಹೈಡ್ ಅಂಡ್ ಸೀಕ್' ಅನ್ನೋ ಕಿರು ಚಿತ್ರವನ್ನು ನಿರ್ದೇಶಿಸಿದ್ದೆ. ಈ ಕಿರು ಚಿತ್ರ ಜಾಗತಿಕ ಮಟ್ಟದಲ್ಲಿಯೂ ಗುರುತಿಸಿಕೊಂಡಿತ್ತು. ಈಗ 'ಸೆಪ್ಟೆಂಬರ್ 21' ಚಿತ್ರವನ್ನು ನಿರ್ದೇಶಿಸುತ್ತಿದ್ದೇನೆ. ಈ ಕಥೆಯನ್ನು ಪಿ.ರಾಜಶೇಖರ್ ಅವರು ಮಲಯಾಳಂನಲ್ಲಿ ಬರೆದಿದ್ದಾರೆ. ಆಲ್ಝೈಮರ್ ರೋಗದ ಸುತ್ತಲ್ಲಿನ ಕಥಾಹಂದರವನ್ನು ಈ ಚಿತ್ರ ಹೊಂದಿದೆ. ಪ್ರಿಯಾಂಕ ಉಪೇಂದ್ರ, ಪ್ರವೀಣ್ ಕುಮಾರ್ ಸಿಂಗ್ ಸಿಸೋಡಿಯಾ, ಜರೀನಾ ವಹಾಬ್ ಮುಂತಾದವರು ತಾರಾ ಬಳಗದಲ್ಲಿದ್ದಾರೆ. ಸದ್ಯದಲ್ಲೇ ಚಿತ್ರೀಕರಣ ಬೆಂಗಳೂರಿನಲ್ಲಿ ಆರಂಭವಾಗಲಿದೆ ಎಂದು ನಿರ್ದೇಶಕಿ ಕರೆನ್ ಕ್ಷಿತಿ ಸುವರ್ಣ ತಿಳಿಸಿದರು. ನನಗೆ ಬಹಳ ಖುಷಿಯಾಗಿದೆ. ಏಕೆಂದರೆ ಇದೇ ಮೊದಲ ಬಾರಿಗೆ ಕಿರಿಯ ವಯಸ್ಸಿನ ನಿರ್ದೇಶಕಿಯ ಜೊತೆಗೆ ಕೆಲಸ ಮಾಡುತ್ತಿದ್ದೇನೆ. ಆಲ್ಝೈಮರ್ ರೋಗದಿಂದ ಬಳಲುತ್ತಿರುವ ರೋಗಿಯನ್ನು ಶುಶ್ರೂಷೆ ಮಾಡುವ ಕೇರ್ ಟೇಕರ್ ಪಾತ್ರವನ್ನು ನಿರ್ವಹಿಸುತ್ತಿದ್ದೇನೆ. ಕಮಲಾ ನನ್ನ ಪಾತ್ರದ ಹೆಸರು. ನನ್ನ ತಂದೆ ಉತ್ತರ ಪ್ರದೇಶದವರು. ಹಾಗಾಗಿ ನನಗೆ ಹಿಂದಿ ಮಾತನಾಡಲು, ಓದಲು ಬರುತ್ತದೆ. ಚಿತ್ರಕ್ಕೆ ಚಾಲನೆ ನೀಡಿದ ಇಂದ್ರಜಿತ್ ಅವರಿಗೆ ಧನ್ಯವಾದ ಎಂದರು ನಟಿ ಪ್ರಿಯಾಂಕ ಉಪೇಂದ್ರ.



## 'ಶಿವಂ ಶಿವಂ ಸನಾತನಂ' ಹಾಡು ಬಿಡುಗಡೆ

ಕರುನಾಡ ಚಕ್ರವರ್ತಿ ಡಾ||ಶಿವರಾಜಕುಮಾರ್, ರಿಯಲ್ ಸ್ಟಾರ್ ಉಪೇಂದ್ರ ಹಾಗೂ ರಾಜ್ ಬಿ ಶೆಟ್ಟಿ ಅಭಿನಯದ, ಖ್ಯಾತ ಸಂಗೀತ ನಿರ್ದೇಶಕ ಅರ್ಜುನ್ ಜನ್ಯ ಚೊಚ್ಚಲ ನಿರ್ದೇಶನದ ಹಾಗೂ ಸೂರಜ್ ಪ್ರೊಡಕ್ಷನ್ಸ್ ಲಾಂಛನದಲ್ಲಿ ಶ್ರೀಮತಿ ಉಮಾ ರಮೇಶ್ ರೆಡ್ಡಿ ಅವರು ನಿರ್ಮಿಸುತ್ತಿರುವ ಬಹು ನಿರೀಕ್ಷಿತ "45" ಚಿತ್ರಕ್ಕಾಗಿ ಡಾ||ವಿ.ನಾಗೇಂದ್ರ ಪ್ರಸಾದ್ ಅವರು ಬರೆದಿರುವ, ವಿಜಯ್ ಪ್ರಕಾಶ್ ಹಾಡಿರುವ ಹಾಗೂ ಅರ್ಜುನ್ ಜನ್ಯ ಅವರೆ ಸಂಗೀತ ನೀಡಿರುವ "ಶಿವಂ ಶಿವಂ ಸನಾತನಂ" ಚಿತ್ರದ ಹಾಡು ಇತ್ತೀಚೆಗೆ ಬಿಡುಗಡೆಯಾಯಿತು. ಆನಂದ ಪೀಠಾಧೀಶ್ವರ ಆಚಾರ್ಯ ಮಹಾಮಂಡಲೇಶ್ವರ ಅನಂತ ಶ್ರೀ ವಿಭೂಷಿತ ಶ್ರೀಬಾಲ್ಕಾನಂದ ಗಿರಿಜಿ ಮಹಾರಾಜ್ ದೂರದ ದೆಹಲಿಯಿಂದ ಆಗಮಿಸಿ ಶಿವನ ಹಾಡನ್ನು ಬಿಡುಗಡೆ ಮಾಡಿ ಚಿತ್ರತಂಡದವನ್ನು ಆಶೀರ್ವದಿಸಿದರು. ಈ ಹಾಡಿಗೆ ಶಿವರಾಜಕುಮಾರ್ ಅವರು ನೃತ್ಯ ಮಾಡಿದ್ದು ವಿಶೇಷವಾಗಿತ್ತು. ಆನಂದ್ ಆಡಿಯೋ ಯೂಟ್ಯೂಬ್ ಚಾನಲ್‌ನಲ್ಲಿ ಈ ಹಾಡು ಬಿಡುಗಡೆಯಾಗಿದ್ದು, ಶಿವನ ಹಾಡಿಗೆ ಮೆಚ್ಚುಗೆಯ ಮಹಾಪೂರವೇ ಹರಿದು ಬರುತ್ತಿದೆ. ಹಾಡು ಬಿಡುಗಡೆ ನಂತರ ಚಿತ್ರತಂಡದ ಸದಸ್ಯರು ಮಾತನಾಡಿದರು. ಒತ್ತಡದ ಕಾರ್ಯಗಳಿದ್ದರೂ ದೂರದ ಊರಿನಿಂದ ಬಂದು ಹಾಡು ಬಿಡುಗಡೆ ಮಾಡಿಕೊಟ್ಟ ಪೂಜ್ಯರಿಗೆ ಅನಂತ ಧನ್ಯವಾದ ಎಂದು ಮಾತನಾಡಿದ ನಿರ್ಮಾಪಕ ರಮೇಶ್ ರೆಡ್ಡಿ , ನಮ್ಮ ಚಿತ್ರಕ್ಕೆ ಅರ್ಜುನ್ ಜನ್ಯ ನಿರ್ದೇಶಕರಾಗಿ ಸಿಕ್ಕಿದ್ದು ಬಹಳ ಖುಷಿಯಾಗಿದೆ ಎಂದರು.



## ಹೊಸ ರೂಪದಲ್ಲಿ 'ಸಂಜು ವೆಡ್ಸ್ ಗೀತಾ -2' ಜೂನ್ 6ರಂದು ಬಿಡುಗಡೆ

ಕನ್ನಡ ಚಿತ್ರರಂಗದಲ್ಲಿ ದೊಡ್ಡ ಮಟ್ಟದ ನಿರೀಕ್ಷೆಗಳನ್ನು ಹುಟ್ಟು ಹಾಕಿದ್ದ ನಾಗಶೇಖರ್ ನಿರ್ದೇಶನದ ಸಂಜು ವೆಡ್ಸ್ ಗೀತಾ -2 ಹಲವಾರು ಅಡೆತಡೆಗಳನ್ನು ಎದುರಿಸಿ, ಜ.17ರಂದು ತರಾತುರಿಯಲ್ಲಿ ಬಿಡುಗಡೆಯಾಗಿತ್ತು. ಪ್ರೇಕ್ಷಕರು ಸಂಜು ವೆಡ್ಸ್ ಗೀತಾ-2 ಚಿತ್ರದ ಕಂಟೆಂಟ್, ಸಾಂಗ್ಸ್, ಅದ್ದೂರಿ ಮೇಕಿಂಗ್ ಎಲ್ಲವನ್ನೂ ತುಂಬಾ ಇಷ್ಟಪಟ್ಟಿದ್ದರು. ಚಿತ್ರದ ನಿರೂಪಣೆ, ಕ್ಯಾಮೆರಾ ವರ್ಕ್ ಎಲ್ಲಾ ಅದ್ಭುತವಾಗಿದ್ದರೂ, ಎಲ್ಲೋ ಒಂದು ಕಡೆ ಚಿತ್ರವನ್ನು ಇನ್ನೂ ಚೆನ್ನಾಗಿ ಮಾಡಬಹುದಿತ್ತು ಎಂಬ ಅಭಿಪ್ರಾಯ ಕೆಲವರಿಂದ ಕೇಳಿಬಂದಿತ್ತು. ಬಿಡುಗಡೆ ಸಂದರ್ಭದಲ್ಲಿ ಒಂದಷ್ಟು ಆತಂಕ ಸೃಷ್ಟಿಯಾಗಿದ್ದ ಕಾರಣ ಎಲ್ಲವನ್ನೂ ಗಮನಿಸಲು ಚಿತ್ರತಂಡಕ್ಕೂ ಸಾಧ್ಯವಾಗಿದ್ದಿಲ್ಲ ಹಾಗಾಗಿ ಮೂರೇ ದಿನದಲ್ಲಿ ಚಿತ್ರದ ಪ್ರದರ್ಶನವನ್ನು ಎಲ್ಲಾ ಕೇಂದ್ರಗಳಲ್ಲಿ ಸ್ಥಗಿತಗೊಳಿಸಲಾಗಿತ್ತು. ಈಗ ಹೊಸದಾಗಿ 21 ನಿಮಿಷಗಳ ಹೃದಯ ಸ್ಪರ್ಶಿ ಚಿತ್ರಣವನ್ನು ಚಿತ್ರಕ್ಕೆ ಮರು ಜೋಡಿಸಲಾಗಿದ್ದು, ಇದೀಗ ಜೂನ್ 6ರಂದು ಹೊಸ ವರ್ಷನ್ ರಿಲೀಸ್ ಮಾಡುವ ಸಿದ್ಧತೆ ನಡೆದಿದೆ, ಫಿಲಂ ಚೇಂಬರ್‌ನಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಚಿತ್ರತಂಡ ಈ ಬಗ್ಗೆ ಮಾಹಿತಿ ಹಂಚಿಕೊಂಡಿತು. ಫಿಲಂ ಚೇಂಬರ್ ಅಧ್ಯಕ್ಷ ನರಸಿಂಹಲು ಮಾತನಾಡುತ್ತ ಯಾವುದೇ ಚಿತ್ರತಂಡ ನಮ್ಮ ಬಳಿ ಬಂದಾಗ ಚೇಂಬರ್ ಸಂಪೂರ್ಣ ಸಹಕಾರ ನೀಡುತ್ತ ಬಂದಿದೆ ಎಂದರು.




## 'ಮಾರ್ನಮಿ'ಗೆ ಮೋಹಕ ತಾರೆ ರಮ್ಯಾ ಸಾಥ್

ಕನ್ನಡ ಚಿತ್ರರಂಗದ ಪ್ರತಿಭಾವಂತ ನಟಿರಲ್ಲಿ ಒಬ್ಬರು ಚೈತ್ರಾ ಜೆ ಆಚಾರ್. ಯಾವುದೇ ಪಾತ್ರ ಕೊಟ್ಟರೂ ಅದಕ್ಕೆ ಜೀವ ತುಂಬಬಲ್ಲ ಸಾಮರ್ಥ್ಯ ಹೊಂದಿರುವ ನಟಿ ಈಗ ಮಾರ್ನಮಿಗೆ ಮದುವೆಯಾಗೋದಿಕ್ಕೆ ಹೊರಟಿದ್ದಾರೆ. ಅರೇ! ಚೈತ್ರಾ ಮದುವೆನಾ ಅಂತಾ ಹುಬ್ಬೇರಿಸಬೇಡಿ. ಮದುವೆ ನಿಜವೇ. ಆದರೆ ರೀಲ್‌ನಲ್ಲಿ. ಕರಾವಳಿ ಭಾಗದ ಪ್ರೇಮಕಥೆಯುಳ್ಳ ಮಾರ್ನಮಿ ಸಿನಿಮಾದಲ್ಲಿ ಚೈತ್ರಾ ಜೆ ಆಚಾರ್ ನಾಯಕಿಯಾಗಿ ನಟಿಸುತ್ತಿದ್ದಾರೆ. ಅವರ ಪಾತ್ರದ ಪರಿಚಯದ ಟೀಸರ್ ಬಿಡುಗಡೆ ಮಾಡಲಾಗಿದೆ. ಗುನಾಧ್ಯ ಪ್ರೊಡಕ್ಷನ್ಸ್ ಯೂಟ್ಯೂಬ್ ಚಾನೆಲ್‌ನಲ್ಲಿ ಚೈತ್ರಾ ಪಾತ್ರದ ಝಲಕ್ ಬಿಡುಗಡೆ ಮಾಡಲಾಗಿದೆ. ಮಾರ್ನಮಿಯಲ್ಲಿ ಚೈತ್ರಾ ದೀಕ್ಷಾ ಎಂಬ ಪಾತ್ರದಲ್ಲಿ ಅಭಿನಯಿಸುತ್ತಿದ್ದು, ತನ್ನ ಮದುವೆ ಬಗ್ಗೆ ಕರಾವಳಿ ಭಾಷೆಯಲ್ಲಿ ಪರಿಚಯ ಮಾಡಿಕೊಳ್ಳುತ್ತಾರೆ. ಡಿ ಗ್ಲಾಮ್ ಲುಕ್‌ನಲ್ಲಿ ಚೈತ್ರಾ ಆಚಾರ್ ಕಾಣಿಸಿಕೊಂಡಿದ್ದು, ಮೋಹಕ ತಾರೆ ರಮ್ಯಾ ತಮ್ಮ ಇನ್‌ಸ್ಟಾಗ್ರಾಂನಲ್ಲಿ ಟೀಸರ್ ಬಿಡುಗಡೆ ಮಾಡಿ ತಂಡಕ್ಕೆ ಶುಭಾಶಯ ತಿಳಿಸಿದ್ದಾರೆ.



## 'ಪುಟ್ಟಣ್ಣನ ಕತ್ತೆ' ಮೊದಲನೋಟ ಬಿಡುಗಡೆ

"ದಾರಿ ಯಾವುದಯ್ಯ ವೈಕುಂಠಕೆ" ಎಂಬ ಉತ್ತಮ ಚಿತ್ರವನ್ನು ನಿರ್ದೇಶನ ಮಾಡಿ ಸೈ ಎನಿಸಿಕೊಂಡಿದ್ದ "ಸಿದ್ದು ಪೂರ್ಣಚಂದ್ರ" ರವರು ಸದಾ ಸಾಮಾಜಿಕ ಕಳಕಳಿಯನ್ನು ಇಟ್ಟುಕೊಂಡು ಹಲವು ವಿಭಿನ್ನ ಚಿತ್ರಗಳನ್ನು ಈಗಾಗಲೇ ನಿರ್ದೇಶನ ಮಾಡಿದ್ದಾರೆ. ಬ್ರಹ್ಮಕಮಲ, ತಾರಿಣಿ, ಈ ಪಾದ ಪುಣ್ಯ ಪಾದ, ಇವುಗಳ ಸಾಲಿಗೆ ಮತ್ತೊಂದು ಹೊಸ ಚಿತ್ರ "ಪುಟ್ಟಣ್ಣನ ಕತ್ತೆ" ಎಂಬ ಚಿತ್ರವೂ ಸೇರಿಕೊಳ್ಳುತ್ತದೆ. ನಿರ್ದೇಶಕರ ಜನುಮದಿನದಂದು ಚಿತ್ರ ತಂಡ "ಪುಟ್ಟಣ್ಣನ ಕತ್ತೆ" ಪೋಸ್ಟರ್ ಬಿಡುಗಡೆ ಮಾಡಿದೆ. ಮೊದಲ ಪೋಸ್ಟರ್‌ನಲ್ಲಿ ಕತ್ತೆಯನ್ನು ತೋರಿಸಿರುವುದು ಚಿತ್ರದ ಶುಭ ಸೂಚನೆ ಎಂದು ಚಿತ್ರ ತಂಡ ಹೇಳಿಕೊಂಡಿದೆ. ಮುಂದಿನ ಪೋಸ್ಟರ್‌ನಲ್ಲಿ ಕಲಾವಿದರನ್ನು ತೋರಿಸಲಾಗುತ್ತದೆ ಎಂದು ನಿರ್ದೇಶಕರು ತಿಳಿಸಿದರು. ಎಲ್ಲರು ನಾಯಿ ಮೇಲೆ ಚಿತ್ರ ಮಾಡಿದರೆ ನಾನ್ಯಾಕೆ ಕತ್ತೆ ಮೇಲೆ ಕತೆ ಬರೆದು ಚಿತ್ರ ಮಾಡಬಾರದು ಅಂತ ಐಡಿಯಾ ಬಂದಾಗ ಈ ಕಥೆ ಹೊಳೆಯಿತು ಎಂದರು.




## ಸರ್ಕಾರಿ ನ್ಯಾಯಬೆಲೆ ಅಂಗಡಿಯಲ್ಲಿ ದಿನಸಿ ವಿತರಿಸಿದ ರಾಗಿಣಿ

ಹುಟ್ಟಿದ ಹಬ್ಬದ ಸಂಭ್ರಮದಲ್ಲಿರುವ ನಟಿ ರಾಗಿಣಿ ದ್ವಿವೇದಿ ತನ್ನ ಹುಟ್ಟುಹಬ್ಬದ ಪ್ರಯುಕ್ತ 'ಸರ್ಕಾರಿ ನ್ಯಾಯಬೆಲೆ ಅಂಗಡಿ'ಯಲ್ಲಿ ಪಡಿತರ ಚೀಟಿದಾರರಿಗೆ ದಿನಸಿ ವಿತರಿಸುವ ಮೂಲಕ ಗಮನ ಸೆಳೆದಿದ್ದಾರೆ. ಹೌದು, ನಟಿ ರಾಗಿಣಿ ದ್ವಿವೇದಿ ಸದ್ಯ 'ಸರ್ಕಾರಿ ನ್ಯಾಯಬೆಲೆ ಅಂಗಡಿ' ಚಿತ್ರದಲ್ಲಿ ಅಭಿನಯಿಸುತ್ತಿರುವುದು ಅನೇಕರಿಗೆ ಗೊತ್ತಿರಬಹುದು. ಈ ಚಿತ್ರದಲ್ಲಿ ನಟಿ ರಾಗಿಣಿ ದ್ವಿವೇದಿ ಹಳ್ಳಿಯ ಹುಡುಗಿಯ ಪಾತ್ರದಲ್ಲಿ ಕಾಣಿಸಿಕೊಳ್ಳುತ್ತಿದ್ದಾರೆ. 'ಸರ್ಕಾರಿ ನ್ಯಾಯಬೆಲೆ ಅಂಗಡಿ'ಯ ಲೋಪ-ದೋಷಗಳನ್ನು ಎತ್ತಿ ಹಿಡಿಯುವ ಪಾತ್ರ ರಾಗಿಣಿ ಅವರದ್ದು. ತಮ್ಮ ಹುಟ್ಟುಹಬ್ಬದ ಸಂದರ್ಭದಲ್ಲಿ ನಟಿ ರಾಗಿಣಿ ದ್ವಿವೇದಿ, ತಮ್ಮ ಮುಂಬರುವ ಸಿನಿಮಾ ಮತ್ತು ಪಾತ್ರಕ್ಕೆ ತಕ್ಕಂತೆ 'ಸರ್ಕಾರಿ ನ್ಯಾಯಬೆಲೆ ಅಂಗಡಿ'ಗೆ ಅಡಿಯಿಟ್ಟಿದ್ದಾರೆ. ಬೆಂಗಳೂರು ಗ್ರಾಮಾಂತರ ಪ್ರದೇಶದ 'ಸರ್ಕಾರಿ ನ್ಯಾಯಬೆಲೆ ಅಂಗಡಿ'ಯಲ್ಲಿ ತಾವೇ ಖುದ್ದಾಗಿ ನಿಂತುಕೊಂಡು ಪಡಿತರ ಚೀಟಿದಾರರಿಗೆ ದಿನಸಿ ವಿತರಿಸುವ ಮೂಲಕ ಪಡಿತರ ವ್ಯವಸ್ಥೆಯನ್ನು ತಿಳಿದುಕೊಂಡರು.



## 'ಮಿರಾಯ್' ಟೀಸರ್ ರಿಲೀಸ್

ಟಾಲಿವುಡ್‌ನ ಹನುಮ್ಯಾನ್ ಖ್ಯಾತಿಯ ನಟ ತೇಜ್ ಸಜ್ಜಾ ಅಭಿನಯದ ಮಿರಾಯ್ ಚಿತ್ರ ರೆಡಿ ಆಗಿದೆ. ಹನುಮ್ಯಾನ್ ಚಿತ್ರ ಆದ್ಮೇಲೆ ಮಾಡಿರೋ ಮತ್ತೊಂದು ಸೂಪರ್ ಹೀರೋ ಚಿತ್ರವೇ ಇದಾಗಿದೆ. ಬಹು ಭಾಷೆಯಲ್ಲಿಯೇ ಬರ್ತಿರೋ ಈ ಸಿನಿಮಾದ ಟೀಸರ್ ಎಂಟ್ರಿಗೆ ಡೇಟ್ ಫಿಕ್ಸ್ ಆಗಿದೆ. ಮೇ 28ಕ್ಕೆ ಮಿರಾಯ್ ಫಸ್ಟ್ ಝಲಕ್ ಬಿಡುಗಡೆಯಾಗಲಿದೆ. ಮಿರಾಯ್ ಚಿತ್ರದಲ್ಲಿ ಭರ್ಜರಿ ಆಕ್ಷನ್‌ಗಳೇ ಇವೆ. ಈ ಆಕ್ಷನ್ ಚಿತ್ರವನ್ನ ಕಾರ್ತಿಕ್ ಘಟ್ಟಮನೇನಿ ಡೈರೆಕ್ಷನ್ ಮಾಡಿದ್ದಾರೆ. ವಿಶೇಷವಾಗಿ ಈ ಚಿತ್ರ 2ಆ ಮತ್ತು 3ಆ ಫಾರ್ಮ್ಯಾಟ್ ಅಲ್ಲಿಯೇ ರಿಲೀಸ್ ಆಗುತ್ತಿದೆ. ಅತಿ ದೊಡ್ಡ ಮಟ್ಟದಲ್ಲಿಯೇ ಈ ಚಿತ್ರ ರಿಲೀಸ್ ಆಗುತ್ತಿದೆ. ಇದೇ ವರ್ಷ ಆಗಸ್ಟ್-1ರಂದು ಮಿರಾಯ್ 8 ಭಾಷೆಯಲ್ಲಿಯೇ ತೆರೆಗೆ ಬರಲಿದೆ.



## ರಕ್ತಸಿಕ್ತ ಅವತಾರದಲ್ಲಿ ಪೃಥ್ವಿ ಅಂಬರ್ ಅಬ್ಬರ



ಪೃಥ್ವಿ ಅಂಬರ್ ಹಾಗೂ ಧನ್ಯ ರಾಮ್ ಕುಮಾರ್ ನಟನೆಯ ಚೌಕಿದಾರ್ ಸಿನಿಮಾದ ಟೀಸರ್ ಒಖಖ ಮ್ಯೂಸಿಕ್ ಯೂಟ್ಯೂಬ್ ಚಾನೆಲ್ ನಲ್ಲಿ ಬಿಡುಗಡೆಯಾಗಿದೆ. ರಕ್ತಸಿಕ್ತ ಅವತಾರವೆತ್ತಿರುವ ಪೃಥ್ವಿ ಹೊಸ ಲುಕ್ ಸಿನಿರಸಿಕರಿಗೆ ಕಿಕ್ ಕೊಟ್ಟಿದ್ದಾರೆ. ನಾಯಕಿ ಧನ್ಯ ರಾಮ್ ಕುಮಾರ್ ಡಿ ಗ್ಲಾಮರ್ ನಲ್ಲಿ ಕಾಣಿಸಿಕೊಂಡಿದ್ದಾರೆ. ಟೀಸರ್ ನಲ್ಲಿ ಎಲ್ಲಾ ಪಾತ್ರಗಳನ್ನು ತೋರಿಸಿರುವ ಚಂದ್ರಶೇಖರ್ ಬಂಡಿಯಪ್ಪ ಕಥೆಯ ಗುಟ್ಟನ್ನು ಎಲ್ಲಿಯೂ ಬಿಟ್ಟುಕೊಟ್ಟಿಲ್ಲ. ಕನ್ನಡ ಹಾಗೂ ತೆಲುಗು ಎರಡು ಭಾಷೆಯಲ್ಲಿ ಟೀಸರ್ ಬಿಡುಗಡೆ ಮಾಡಲಾಗಿದ್ದು, ಖಾಕಿ ಲುಕ್ ನಲ್ಲಿ ಸುಧಾರಾಣಿ ಖದರ್ ತೋರಿಸಿದ್ದಾರೆ. ಹಿರಿಯ ನಟ ಸಾಯಿ ಕುಮಾರ್ ಪೃಥ್ವಿ ತಂದೆ ಪಾತ್ರದಲ್ಲಿ ಗಮನ ಸೆಳೆಯುತ್ತಾರೆ. ಧರ್ಮ, ಹಿರಿಯ ನಟಿ ಶ್ವೇತಾ ತಾರಾ ಬಳಗದಲ್ಲಿದ್ದಾರೆ. ಸಚಿನ್ ಬಸ್ರೂರ್ ಸಂಗೀತ ಟೀಸರ್‌ನಲ್ಲಿ ಗಮನಸೆಳೆಯುತ್ತಿದೆ. ಕಲ್ಲಹಳ್ಳಿ ಚಂದ್ರಶೇಖರ್ ನಿರ್ಮಾಣ ಮಾಡುತ್ತಿದ್ದಾರೆ.

## 'ಠಾಣೆ' ಮೇ 30ರಂದು ತೆರೆಗೆ

ಪಿ.ಸಿ.ಡಿ 2 ಫಿಲಂ ಫ್ಯಾಕ್ಟರಿ ಲಾಂಛನದಲ್ಲಿ ಗಾಯತ್ರಿ ಎಂ ನಿರ್ಮಿಸಿರುವ, ಎಸ್.ಭಗತ್ ರಾಜ್ ನಿರ್ದೇಶನದ ಹಾಗೂ ಪ್ರವೀಣ್ ನಾಯಕನಾಗಿ ನಟಿಸಿರುವ "ಠಾಣೆ" ಚಿತ್ರದ ಟ್ರೇಲರ್ ಇತ್ತೀಚೆಗೆ ಬಿಡುಗಡೆಯಾಯಿತು.



ಹೆಸರಾಂತ ನಟಿ ಮಾಲತಿ ಸುಧೀರ್ "ಠಾಣೆ" ಚಿತ್ರದ ಟ್ರೇಲರ್ ಬಿಡುಗಡೆ ಮಾಡಿ ಚಿತ್ರತಂಡಕ್ಕೆ ಶುಭ ಕೋರಿದರು. ಕನ್ನಡ ಸಾಹಿತ್ಯ ಪರಿಷತ್‌ನ ಕಾರ್ಯದರ್ಶಿ ಸಂತೋಷ್ ಹಾನಗಲ್ ಮುಖ್ಯ ಅತಿಥಿಗಳಾಗಿ ಆಗಮಿಸಿದ್ದರು. ಟ್ರೇಲರ್ ನಲ್ಲೇ ಸಾಕಷ್ಟು ಕುತೂಹಲ ಮೂಡಿಸಿರುವ ಈ ಚಿತ್ರ ಮೇ 30ರಂದು ಬಿಡುಗಡೆಯಾಗಲಿದೆ. ಟ್ರೇಲರ್ ಬಿಡುಗಡೆ ನಂತರ ಚಿತ್ರದ ಕುರಿತು ಚಿತ್ರತಂಡದ ಸದಸ್ಯರು ಮಾತನಾಡಿದರು. 'ಠಾಣೆ' ಚಿತ್ರದ ಟ್ರೇಲರ್ ಬಿಡುಗಡೆ ಮಾಡಿಕೊಟ್ಟ ನಟಿ ಮಾಲತಿ ಸುಧೀರ್ ಅವರಿಗೆ ಧನ್ಯವಾದ ತಿಳಿಸಿ ಮಾತನಾಡಿದ ನಿರ್ದೇಶಕ ಭಗತ್ ರಾಜ್, "ಠಾಣೆ" ಆರಂಭದಿಂದಲೂ ಸಾಕಷ್ಟು ನಿರೀಕ್ಷೆ ಹುಟ್ಟಿಸಿರುವ ಚಿತ್ರ. 'ಠಾಣೆ' ಎಂದರೆ

ಕರಾವಳಿ ತರಂಗಿಣಿ

# ಸಿನಿ ತರಂಗಿಣಿ

## ಜೂನ್ 6ರಂದು ಬಿಡುಗಡೆಯಾಗಲಿದೆ 'ಮಾದೇವ'




ರಾಧಾಕೃಷ್ಣ ಪಿಕ್ಚರ್ಸ್ ಲಾಂಛನದಲ್ಲಿ ಆರ್ ಕೇಶವ(ದೇವಸಂದ್ರ) ನಿರ್ಮಿಸಿರುವ, ನವೀನ್ ರೆಡ್ಡಿ ಬಿ ನಿರ್ದೇಶನದ ಹಾಗೂ ಟೈಗರ್ ವಿನೋದ್ ಪ್ರಭಾಕರ್ ನಾಯಕರಾಗಿ ನಟಿಸಿರುವ "ಮಾದೇವ" ಚಿತ್ರ ಜೂನ್ 6 ರಂದು ರಾಜ್ಯಾದ್ಯಂತ ಅದ್ದೂರಿಯಾಗಿ ಬಿಡುಗಡೆಯಾಗಲಿದೆ. ಈ ಕುರಿತು ಆಯೋಜಿಸಲಾಗಿದ್ದ ಪತ್ರಿಕಾಗೋಷ್ಠಿಯಲ್ಲಿ ಚಿತ್ರತಂಡದ ಮಾತನಾಡಿದರು. "ಮಾದೇವ" ಚಿತ್ರ 1980ರ ಕಾಲಘಟ್ಟದಲ್ಲಿ ನಡೆಯುವ ಕಥಾಹಂದರ ಹೊಂದಿರುವ ಚಿತ್ರ. ವಿನೋದ್ ಪ್ರಭಾಕರ್ ಅವರು ಈ ಚಿತ್ರದಲ್ಲಿ "ಹ್ಯಾಂಗ್ ಮ್ಯಾನ್" ಪಾತ್ರದಲ್ಲಿ ಕಾಣಿಸಿಕೊಂಡಿದ್ದಾರೆ. ಸೋನಾಲ್ ಮೊಂತೆರೊ ನಾಯಕಿಯಾಗಿ ಅಭಿನಯಿಸಿದ್ದಾರೆ. ವಿಶೇಷ ಪಾತ್ರದಲ್ಲಿ ಶ್ರೀನಗರ ಕಿಟ್ಟಿ ಹಾಗೂ ಅತಿಥಿಪಾತ್ರದಲ್ಲಿ ಮಾಲಾಶ್ರೀ ನಟಿಸಿದ್ದಾರೆ. ಶೃತಿ, ಅಚ್ಯುತ ಕುಮಾರ್, ಕಾಕ್ರೋಜ್ ಸುಧೀ, ಬಲ ರಾಜ್ವಡಿ ಮುಂತಾದವರು ಚಿತ್ರದಲ್ಲಿದ್ದಾರೆ.

## ಜುಲೈ 18ಕ್ಕೆ ಯುವರಾಜ್ ಕುಮಾರ್ 'ಎಕ್ಕ'



ಯುವ ಸಿನಿಮಾ ಬಳಿಕ ದೊಡ್ಮನೆ ಕುಡಿ ಯುವರಾಜ್ ಕುಮಾರ್ ನಟಿಸಿರುವ ಮತ್ತೊಂದು ಸಿನಿಮಾ ಎಕ್ಕ. ಜುಲೈ 18ಕ್ಕೆ ಎಕ್ಕ ಸಿನಿಮಾ ಅದ್ದೂರಿಯಾಗಿ ಬಿಡುಗಡೆಯಾಗುತ್ತಿದೆ. ಪಿಆರ್‌ಕೆ ಪ್ರೊಡಕ್ಷನ್ಸ್, ಕೆಆರ್‌ಜಿ ಸ್ಟುಡಿಯೋಸ್ ಹಾಗೂ ಜಯಣ್ಣ ಫಿಲ್ಮ್ಸ್ ಒಟ್ಟಾಗಿ ಚಿತ್ರ ನಿರ್ಮಾಣ ಮಾಡುತ್ತಿರುವ ಎಕ್ಕ ಸಿನಿಮಾಗೆ ರೋಹಿತ್ ಪದಕಿ ಆಕ್ಷನ್ ಕಟ್ ಹೇಳಿದ್ದಾರೆ. ನಾಯಕ ಯುವರಾಜ್ ಕುಮಾರ್‌ಗೆ ಸಂಜನಾ ಆನಂದ್ ಹಾಗೂ ಸಂಪದಾ ನಾಯಕಿಯರಾಗಿ ಸಾಥ್ ಕೊಟ್ಟಿದ್ದಾರೆ. ಅತುಲ್ ಕುಲಕರ್ಣಿ, ಡೆಡ್ಲಿ ಆದಿತ್ಯಾ ಸೇರಿದಂತೆ ದೊಡ್ಡ ತಾರಗಣ ಚಿತ್ರದಲ್ಲಿದೆ. 'ರತ್ನನ್ ಪ್ರಪಂಚ' ಬಳಿಕ 'ಉತ್ತರಕಾಂಡ' ಸಿನಿಮಾ ಆರಂಭಿಸಿದ್ದ ರೋಹಿತ್ ಪದಕಿ 'ಎಕ್ಕ' ಚಿತ್ರ ಕೈಗೆತ್ತಿಕೊಂಡಿದ್ದಾರೆ. ರೋಹಿತ್ ಪದಕಿ ನಿರ್ದೇಶನದ ಪಕ್ಕಾ ಕಮರ್ಷಿಯಲ್ ಎಂಟರ್‌ಟೈನರ್ ಸಿನಿಮಾ 'ಎಕ್ಕ'.

## ಜೂನ್ ತಿಂಗಳಲ್ಲಿ ತೆರೆಗೆ ಬರಲಿದೆ ಎಕ್ಸ್&ವೈ

"ರಾಮಾ ರಾಮಾ ರೇ" ಖ್ಯಾತಿಯ ಡಿ. ಸತ್ಯಪ್ರಕಾಶ್ ನಿರ್ಮಿಸಿ, ನಿರ್ದೇಶಿಸುವುದರ ಜೊತೆಗೆ ಪ್ರಮುಖಪಾತ್ರದಲ್ಲೂ ನಟಿಸಿರುವ "ಎಕ್ಸ್&ವೈ" ಚಿತ್ರವನ್ನು ವೀಕ್ಷಿಸಿದ ಪ್ರಾದೇಶಿಕ ಸೆನ್ಸಾರ್ ಮಂಡಳಿ ಯು/ಎ ಪ್ರಮಾಣ ಪತ್ರವನ್ನು ನೀಡಿದೆ. ಜೂನ್ ತಿಂಗಳಲೇ ಚಿತ್ರವನ್ನು ತೆರೆಗೆ ತರುವ ಸಿದ್ಧತೆಯನ್ನು ಚಿತ್ರತಂಡ ನಡೆಸಿದೆ. ಈಗಾಗಲೇ ಪೋಸ್ಟರ್ ಸೇರಿದಂತೆ ಕೆಲವು ಕಂಟೆಂಟ್‌ಗಳ ಮೂಲಕ ತೀವ್ರ ಕುತೂಹಲ ಮೂಡಿಸಿರುವ ಈ ಚಿತ್ರಕ್ಕೆ ನಿರ್ದೇಶಕ ಸತ್ಯಪ್ರಕಾಶ್ ಅವರೆ ಕಥೆ, ಚಿತ್ರಕಥೆ, ಸಂಭಾಷಣೆ ಬರೆದಿದ್ದಾರೆ. "ಎಕ್ಸ್&ವೈ" ಡಿ. ಸತ್ಯಪ್ರಕಾಶ್ ನಿರ್ದೇಶನದ ನಾಲ್ಕನೇ ಚಿತ್ರ. ಈ ಮೊದಲು "ರಾಮಾ ರಾಮಾ ರೇ", "ಒಂದಲ್ಲಾ ಎರಡಲ್ಲಾ" ಮತ್ತು "ಮ್ಯಾನ್ ಆಫ್ ದಿ ಮ್ಯಾಚ್" ಚಿತ್ರಗಳನ್ನು ಅವರು ನಿರ್ದೇಶಿಸಿದ್ದು, ಮೂರು ಚಿತ್ರಗಳು ಭಿನ್ನ ಕಥೆಯ ಮೂಲಕ ಪ್ರೇಕ್ಷಕರನ್ನು ಸೆಳೆಯುವಲ್ಲಿ ಯಶಸ್ವಿಯಾಗಿದೆ.



## ಮೇ 30ರಂದು ಗೀತಪ್ರಿಯಾರ 'ತಾಯವ್ವ' ತೆರೆಗೆ..

ಗೀತಪ್ರಿಯಾ ಮೊದಲ ಬಾರಿಗೆ ನಿರ್ಮಿಸಿ ಜೊತೆಗೆ ನಾಯಕಿಯಾಗಿ ಮುಖ್ಯ ಭೂಮಿಕೆಯಲ್ಲಿ ಅಭಿನಯಿಸಿರುವ 'ತಾಯವ್ವ' ಚಿತ್ರ ರಾಜ್ಯದಾದ್ಯಂತ ಇದೇ ಮೇ. 30ರ ಶುಕ್ರವಾರ ತೆರೆಗೆ ಬರಲಿದೆ. ಮೂರು ದಶಕದ ಹಿಂದೆಯೇ 'ತಾಯವ್ವ' ಎಂಬ ಹೆಸರಿನಲ್ಲಿ ಚಿತ್ರವೊಂದು ತೆರೆಗೆ ಬಂದಿದ್ದು, ಆ ಚಿತ್ರದಲ್ಲಿ ಹಿರಿಯ ನಟಿ ಉಮಾಶ್ರೀ ಮತ್ತು ನಟ ಕಿಚ್ಚ ಸುದೀಪ್ ಮುಖ್ಯ ಭೂಮಿಕೆಯಲ್ಲಿ ಅಭಿನಯಿಸಿದ್ದರು. ಈಗ ಅದೇ 'ತಾಯವ್ವ' ಹೆಸರಿನಲ್ಲಿ ಹೊಸ ಚಿತ್ರ ತಯಾರಾಗಿದೆ. ಇನ್ನು 'ತಾಯವ್ವ' ಚಿತ್ರದ ಹೆಸರೇ ಹೇಳುವಂತೆ, ಇದು ಅಪ್ಪಟ ಗ್ರಾಮೀಣ ಸೊಗಡಿನ, ಮಹಿಳಾ ಪ್ರಧಾನ ಕಥಾಹಂದರ ಹೊಂದಿರುವ ಸಾಮಾಜಿಕ ಕಳಕಳಿಯ ಚಿತ್ರ. ಗ್ರಾಮೀಣ ಪ್ರದೇಶದ ಸೂಲಗಿತ್ತಿ ಮಹಿಳೆಯೊಬ್ಬಳು ಹೇಗೆ ಹೆಣ್ಣುಮಕ್ಕಳ ರಕ್ಷಣೆ ಮಾಡಿ, ಸಮಾಜಕ್ಕೆ ಮಾದರಿಯಾಗುತ್ತಾಳೆ ಎಂಬ ವಿಷಯದ ಸುತ್ತ 'ತಾಯವ್ವ' ಚಿತ್ರದ ಕಥಾಹಂದರ ಸಾಗುತ್ತದೆ.










Edited, Published, Printed by Lalita Kumari (Lalithasri Preetham Rai) Shop N0: 6, Lingamma Towers. Opp. Pandeshwar police station, Pandeshwar Mangaluru 575001. Dakshina Kannada.
All Rights Reserved RNI Ref: 1327299/KARKAN26532. Printed @ N R K Media World, No-10, 'A' 1st floor, 4th cross, 4th main, Gandhinagar Bengaluru-560009. email: karavalitharangini@gmail.com PH: +91 9880109212